EMAIL : dairyadadaari@gmail.com ಸಂಪುಟ: 01 ಸಂಚಿಕೆ: 21
ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಶನಿವಾರ: 27-12-2025

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಮಹತ್ವ ಪಡೆದ ಸಿಎಂ ದೆಹಲಿ ಭೇಟಿ

**ಬೆಂಗಳೂರು, ಡಿ. 26–** ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಜಟಾಪಟಿ ಬೂದಿ ಮುಚ್ಚಿದ ಕೆಂಡದಂತಿರುವಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ದೆಹಲಿಗೆ ತೆರಳುತ್ತಿದ್ದು, ನಾಳೆ ಅವರು ವರಿಷ್ಠರನ್ನು ಭೇಟಿ ಮಾಡುತ್ತಿರುವುದು ನಾನಾ ಚರ್ಚೆಗೆ ಗ್ರಾಸವಾಗಿದೆ.

ಕಳೆದ ಒಂದು ತಿಂಗಳಿಂದ ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಚರ್ಚೆಗಳು ಬಿರುಸಾಗಿ ಅಧಿಕಾರ ಹಂಚಿಕೆ, ಕುರ್ಚಿ ಕಿತ್ತಾಟ ತಾರಕಕ್ಕೇರಿ ಹೈಕಮಾಂಡ್ ಈ ವಿಚಾರದಲ್ಲಿ ಮಧ್ಯೆ ಪ್ರವೇಶಿಸಲು ಹೆಚ್ಚಿನ ಉತ್ಸುಕತೆ ತೋರದ ಕಾರಣ ಸದ್ಯ ಪರಿಸ್ಥಿತಿ ಬೂದಿ ಮುಚ್ಚಿದ ಕೆಂಡದಂತಿದೆ.ಹೀಗಿರುವಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಾಳೆ ನವದೆಹಲಿಯಲ್ಲಿ ನಡೆಯಲಿರುವ ಕಾಂಗ್ರೆಸ್‌ನ ರಾಷ್ಟ್ರೀಯ ಕಾರ್ಯಕಾರಿಣಿ ಸಭೆಯಲ್ಲಿ ಪಾಲ್ಗೊಳ್ಳಲು ಇಂದು ದೆಹಲಿಗೆ ತೆರಳುತ್ತಿದ್ದಾರೆ.

ಈ ರಾಷ್ಟ್ರೀಯ ಕಾರ್ಯಕಾರಿಣಿ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿಯವರನ್ನು ಭೇಟಿ ಮಾಡುವ ಸಾಧ್ಯತೆಗಳು ಹೆಚ್ಚಿವೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಹುಲ್‌ಗಾಂಧಿಯವರನ್ನು ನಾಳೆ ಭೇಟಿ ಮಾಡಿ ರಾಜ್ಯ ಕಾಂಗ್ರೆಸ್‌ನ ವಿದ್ಯಮಾನಗಳ ಬಗ್ಗೆ ಚರ್ಚೆ ನಡೆಸಲಿದ್ದು, ಅಧಿಕಾರ ಹಂಚಿಕೆಯ ಜಟಾಪಟಿ ಗೊಂದಲಗಳನ್ನು ನಿವಾರಿಸುವಂತೆ ಮನವಿ ಮಾಡುವ ಜತೆಗೆ



ಸಂಪುಟ ಪುನಾರಚನೆ ಬಗ್ಗೆಯೂ ಅವರ ಜತೆ ಚರ್ಚಿಸುವ ಸಾಧ್ಯತೆಗಳಿವೆ ಎಂದು ಹೇಳಲಾಗಿದೆ.

ರಾಜ್ಯ ಕಾಂಗ್ರೆಸ್‌ನಲ್ಲಿ ಕಳೆದ ಒಂದು ತಿಂಗಳಿಂದ ಅಧಿಕಾರ ಹಂಚಿಕೆಯ ಜಟಾಪಟಿ ತಾರಕಕ್ಕೇರಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರ ಉಪಹಾರ ಸಭೆಗಳ ನಂತರ ಸ್ವಲ್ಪಮಟ್ಟಿಗೆ ಅಧಿಕಾರ ಹಂಚಿಕೆಯ ಜಟಾಪಟಿಗೆ ವಿರಾಮ ಬಿದ್ದಂತಾಗಿತ್ತು.

ಆದರೆ ಬೆಳಗಾವಿಯಲ್ಲಿ ನಡೆದ ವಿಧಾನಮಂಡಲದ ಚಳಿಗಾಲದ ಅಧಿವೇಶನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪುತ್ರ ಯತೀಂದ್ರ ಸಿದ್ದರಾಮಯ್ಯನವರು ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಇಲ್ಲ ಎಂದು ಹೈಕಮಾಂಡ್ ಹೇಳಿದ್ದಾರೆ ಎಂದು ಹೇಳಿದ್ದು ಕಿಚ್ಚಿಗೆ ಕಾರಣವಾಗಿತ್ತು. ಇದು ಮತ್ತೆ ಬಣ ರಾಜಕೀಯ, ನಾಯಕತ್ವ ಬದಲಾವಣೆಗೆ ಸಂಬಂಧಿಸಿದಂತೆ ಶಾಸಕರ ಪರ–ವಿರೋಧ ಹೇಳಿಕೆಗೂ ಕಾರಣವಾಗಿ ಅಧಿಕಾರ ಹಂಚಿಕೆಯ ಜಟಾಪಟಿ ಮತ್ತೆ ತಾರಕಕ್ಕೇರಿತ್ತು.

ಇದರ ನಡುವೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯನವರು ವಿಧಾನಸಭೆಯಲ್ಲಿ ಎರಡೆರಡು ಬಾರಿ ಇಂದೂ ನಾನೇ ಮುಖ್ಯಮಂತ್ರಿ, ಮುಂದೆಯೂ ನಾನೇ ಮುಖ್ಯಮಂತ್ರಿ. ಹೈಕಮಾಂಡ್ ನನ್ನ ಪರ ಇದೆ ಎಂದು ಹೇಳಿಕೆ ನೀಡಿದ್ದರು. ಇದು ಅಧಿಕಾರ ಹಂಚಿಕೆಯ ಜಟಾಪಟಿಯ ಬೆಂಕಿಗೆ ಮತ್ತಷ್ಟು ತುಪ್ಪ ಸುರಿದಿತ್ತು.

ಈ ಎಲ್ಲಾ ಬೆಳವಣಿಗೆಗಳ ನಡುವೆಯೇ ಕಾಂಗ್ರೆಸ್ ಹೈಕಮಾಂಡ್ ಅಧಿವೇಶನದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರನ್ನು ದೆಹಲಿಗೆ ಕರೆಸಿಕೊಂಡು ಸಂಧಾನ ಸೂತ್ರ ರೂಪಿಸುತ್ತದೆ ಎಂದು ಹೇಳಲಾಗಿತ್ತು. ಆದರೆ. ಎರಡು ದಿನಗಳ ಹಿಂದೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಅಧಿಕಾರ ಹಂಚಿಕೆಯ ಸಮಸ್ಯೆ ವಿಚಾರದಲ್ಲಿ ಹೈಕಮಾಂಡ್ ಮಧ್ಯೆ ಪ್ರವೇಶಿಸಲ್ಲ, ಇದು ಸ್ಥಳೀಯವಾಗಿಯೇ ಸೃಷ್ಟಿಸಿಕೊಂಡಿರುವ ಸಮಸ್ಯೆ, ಸ್ಥಳೀಯ ನಾಯಕರೇ ಬಗೆಹರಿಸಿಕೊಳ್ಳಬೇಕು ಎಂದು ಖಡಕ್ ಆಗಿ ಹೇಳಿದ್ದು ಕಾಂಗ್ರೆಸ್‌ನಲ್ಲಿ ಗೊಂದಲಗಳನ್ನು ಮತ್ತಷ್ಟು ಹೆಚ್ಚಿಸಿತ್ತು.

ಇದರ ನಡುವೆಯೇ ಉಪಮುಖ್ಯಮಂತಿ ಡಿ.ಕೆ. ಶಿವಕುಮಾರ್ ನಿನ್ನೆ ಬೆಂಗಳೂರಿನಲ್ಲಿ ಎಐಸಿಸಿ 2ನೇಪುಟಕ್ಕೆ►

## ತಾಲೂಕಿನ ಶಾಶ್ವತ ನೀರಾವರಿ ಸೌಲಭ್ಯಕ್ಕಾಗಿ ಡಿಸಿಎಂ ಭೇಟಿ ಮಾಡಿದ ಶಾಸಕ ಎಂ.ವೈ.ಪಾಟೀಲ, ಕೆಕೆಆರ್ಟಿಸಿ ಅಧ್ಯಕ್ಷ ಅರುಣಕುಮಾರ ಪಾಟೀಲ



**ಅಫಜಲಪುರ ; ಡಿ.26:** ಉಪ ಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವರಾದ ಡಿ.ಕೆ.ಶಿವಕುಮಾರ್ ಅವರನ್ನು ಬೆಂಗಳೂರಿನ ಅವರ ನಿವಾಸದಲ್ಲಿ ಕ್ಷೇತ್ರದಶಾಸಕ ಎಂ.ವೈ.ಪಾಟೀಲ್ ಅವರು ಭೇಟಿ ಮಾಡಿ,ಮತಕ್ಷೇತ್ರದ ಕಲಬುರಗಿ ತಾಲೂಕಿನ ಕವಲಗಾ (ಕೆ ಗ್ರಾಮ ಸೇರಿದಂತೆ ಒಟ್ಟು 32 ಹಳ್ಳಿಗಳಿಗೆ ಶಾಶ್ವತ ನೀರಾವರಿ ಸೌಲಭ್ಯ ಕಲ್ಪಿಸುವ ಮಹತ್ವಾಕಾಂಕ್ಷಿ ಯೋಜನೆ ಕುರಿತು ಸುದೀರ್ಘ ಚರ್ಚೆ ನಡೆಸಿದರು.

ಸುಮಾರು 400 ಕೋಟಿ ರೂ.ವೆಚ್ಚದ ವಿಸ್ತತ ಯೋಜನಾ ವರದಿ (ಡಿ.ಪಿ.ಆರ್) ಈಗಾಗಲೇ ಸಿದ್ಧಗೊಂಡು ಸಲ್ಲಿಕೆಯಾಗಿರುವ ವಿಷಯವನ್ನು ಉಪಮುಖ್ಯಮಂತ್ರಿಗಳ ಗಮನಕ್ಕೆ ತಂದ ಶಾಸಕರು, ರೈತರ ಬದುಕಿಗೆ ನೇರವಾಗಿ ನೀಡುವ ಈ ಯೋಜನೆಯನ್ನು ಯಾವುದೇ ವಿಳಂಬವಿಲ್ಲದೆ ಶೀಘ್ರವಾಗಿ ಅನುಷ್ಠಾನಗೊಳಿಸುವಂತೆ ಮನವಿ ಮಾಡಿದರು.

ಈ ಯೋಜನೆಯಿಂದ ನೀರಾವರಿ ಸೌಲಭ್ಯ ಕೃಷಿಗೆ ಶಾಶ್ವತ ಪರಿಹಾರ ದೊರೆತಲ್ಲಿ ಸಿಗುವುದರೊಂದಿಗೆ ಭೂಮಿ ಅಭಿವೃದ್ಧಿ, ಉದ್ಯೋಗ ಸೃಷ್ಟಿ ಹಾಗೂ ಗ್ರಾಮೀಣ ಆರ್ಥಿಕತೆಯ ಸಮಗ್ರ ಅಭಿವೃದ್ಧಿಗೆ ದಾರಿ ತೆರೆದುಕೊಳ್ಳಲಿದೆ ಎಂಬ ಅಂಶವನ್ನು ವಿವರಿಸಿದರು.

## ರಾಷ್ಟ್ರೀಯ ಮತದಾರ ದಿನಾಚರಣೆ ರಾಯಚೂರಲ್ಲಿ ಪ್ರಬಂಧ ಸ್ಪರ್ಧೆ ನಡೆಸಿ ವಿದ್ಯಾರ್ಥಿಗಳಿಗೆ ಜಾಗೃತಿ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಮತದಾರ ದಿನಾಚರಣೆಯ ಪ್ರಯುಕ್ತ ಜಿಲ್ಲಾಮಟ್ಟದ ಪ್ರಬಂಧ ಸ್ಪರ್ಧೆಯು ಇತ್ತೀಚೆಗೆ ನಗರದ ಜಲ ನಿರ್ಮಲ ಸಭಾಂಗಣದಲ್ಲಿ ನಡೆಯಿತು. ಶಾಲಾ ಮಟ್ಟದಲ್ಲಿ ಹಾಗೂ ತಾಲೂಕು ಮಟ್ಟದಲ್ಲಿ ಈ ಹಿಂದೆ ನಡೆದ ಪ್ರಬಂಧ ಸ್ಪರ್ಧೆಯಲ್ಲಿ ಭಾಗಿಯಾದ ಪ್ರಬಂಧ ವಿಜೇತರು ಜಿಲ್ಲಾಮಟ್ಟದ ಸ್ಪರ್ಧೆಗಾಗಿ ಜಲನಿರ್ಮಲ ಸಭಾಂಗಣದಲ್ಲಿ ಸೇರಿದ್ದರು. 4ನೇಪುಟಕ್ಕೆ►

# ಪ್ರಯಾಣಿಕರಿಗೆ ಅನುಕೂಲ ಕಲ್ಪಿಸಲು 16 ನಗರ ಹೊಸ ಬಸ್‌ಗಳಿಗೆ ಚಾಲನೆ: ಶಾಸಕರಾದ ಡಾ.ಶಿವರಾಜ ಎಸ್ ಪಾಟೀಲ್

ಧೈರ್ಯದ ದಾರಿ

**ರಾಯಚೂರು,ಡಿ.26:** ರಾಯಚೂರು ನಗರದ ವಿವಿಧೆಡೆ ನಿತ್ಯ ತೆರಳುವ ಪ್ರಯಾಣಿಕರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ 16 ನಗರ ಹೊಸ ಬಸ್‌ಗಳಿಗೆ ಚಾಲನೆ ನೀಡಲಾಗಿದ್ದು, ಇದರಿಂದ ಸಾರ್ವಜನಿಕರು, ಮಹಿಳೆಯರು ಹಾಗೂ ಮಕ್ಕಳಿಗೆ ಅನುಕೂಲವಾಗಲಿದೆ ಎಂದು ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ. ಶಿವರಾಜ ಎಸ್. ಪಾಟೀಲ್ ಅವರು ಹೇಳಿದರು. ಡಿಸೆಂಬರ್ 26ರ ಶುಕ್ರವಾರ ದಂದು ನಗರದ ಕೆ.ಕೆ.ಆರ್.ಟಿ.ಸಿ ಮೂರನೇ ಘಟಕದಲ್ಲಿ ಹಮ್ಮಿಕೊಳ್ಳಲಾಗಿದ್ದ 16 ನಗರ ಸಾರಿಗೆ ಬಸ್ಸುಗಳಿಗೆ ಪೂಜಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವು ನಗರ ಸಾರಿಗೆ ವ್ಯವಸ್ಥೆಯನ್ನು ಇನ್ನಷ್ಟು ಉತ್ತಮಗೊಳಿಸಲು ಮೇ ಟಾಟಾ ಮೋಟಾರ್ಸ ತಯಾರಿಕೆಯ ಹೊಸ ನಗರ ಸಾರಿಗೆ ಬಸ್ಸಗಳನ್ನು ಸೇರ್ಪಡೆಗೊಳಿಸುತ್ತಿರುವುದು ಸಂತಷದ ಸಂಗತಿಯಾಗಿದೆ.

ಈ ಬಸ್‌ಗಳಿಗೆ 187 ಎಚ್.ಪಿ. ಸಾಮರ್ಥ್ಯದ ಬಿಎಸ್–6 ಎಂಜಿನ್‌ಗಳನ್ನು ಅಳವಡಿಸಲಾಗಿದ್ದು, ಈ ಬಸ್‌ಗಳನ್ನು ಆಟೋಮೋಟಿವ್ ಇಂಡಸ್ಟ್ರಿ ಸ್ಟ್ಯಾಂಡರ್ಡ್– ಎಐಎಸ್–052 ಬಸ್ ಕೋಡ್ ನಂತೆ ನಿರ್ಮಿಸಲಾಗಿದೆ. ಈ ಬಸ್ ಗಳು 40



ಪ್ರಯಾಣಿಕ ಆಸನಗಳನ್ನು ಹೊಂದಿದ್ದು, ಎಲ್‌ಇಡಿ ಟ್ಯೂಬ್ ಲೈಟ್ ಅಳವಡಿಸುವುದರೊಂದಿಗೆ ಒಳಾಂಗಣವನ್ನು ಉತ್ತಮವಾಗಿ ವಿನ್ಯಾಗೊಳಿಸಲಾಗಿದೆ ಎಂದರು.

ಈ ಬಸ್‌ಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರ ಸುರಕ್ಷತೆಗಾಗಿ ಒಟ್ಟು ನಾಲ್ಕು ಸಿ.ಸಿ. ಕ್ಯಾಮೆರಾಗಳನ್ನು ಆಳವಡಿಸಿಲಾಗಿದೆ. ಜೊತೆಗೆ ಆಧುನಿಕ ತಂತ್ರಜ್ಞಾನ ಹೊಂದಿರುವ ಸ್ವಯಂ ಚಾಲಿತ ಅಗ್ನಿ ನಂದಕ ಉಪಕರಣಗಳನ್ನು, ರೀವರ್ಸ್ ಪಾಕಿಂಗ್ ಅಲರಾಮ್ ವ್ಯವಸ್ಥೆ ಹಾಗೂ ಲೋಕೆಶನ್ ಟ್ರಾಕಿಂಗ್, ಪ್ಯಾನಿಕ್ ಬಟನಗಳನ್ನು ಅಳವಡಿಸಲಾಗಿದೆ. ಬಸ್‌ಗಳನ್ನು ಸರಿಯಾಗಿ ಉಪಯೋಗಿಸಬೇಕೆಂದು ನಿಗಮದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ವೇಳೆ, ವೇಳೆ ನೂತನ ಬಸ್‌ಗಳಲ್ಲಿ ಶಾಸಕರು ಸಂಚರಿಸಿ ಬಸ್‌ಗಳ ಗುಣಮಟ್ಟ ಪರೀಕ್ಷಿಸಿದರು.

ಇದೇ ಸಂದರ್ಭದಲ್ಲಿ ಮುಖಂಡರಾದ ರವಿ ಜಲ್ದಾರ್, ರಾಯಚೂರು ವಿಭಾಗದ ಸಂಚಾರಿ ಅಧಿಕಾರಿ ಚಂದ್ರಶೇಖರ ಕೆ.ಎಲ್., ವಿಭಾಗದ ತಾಂತ್ರಿಕ ಅಭಿಯಂತರರಾದ ನಾಗರಾಜ್ ವರಾದ್, ಆಡಳಿತ ಅಧಿಕಾರಿ ದೇವರಾಜ್, ಡಿಪೋ ವ್ಯವಸ್ಥಾಪಕ ನಾನೇಗೌಡ, ಭದ್ರತಾ ಮತ್ತು ಜಾಗೃತಿ ಅಧಿಕಾರಿ ಶ್ರೀನಿವಾಸ ಸೇರಿದಂತೆ ವಿವಿಧ ವಿಭಾಗದ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಮುಖಂಡರು ಇದ್ದರು.

# ರಾಯಚೂರು ಜಿಲ್ಲೆಯಲ್ಲಿ ಪಲ್ಸ್ ಪೋಲಿಯೋ ಶೇ.100.01 ರಷ್ಟು ಸಾಧನೆ

ಧೈರ್ಯದ ದಾರಿ

**ರಾಯಚೂರು,ಡಿ.26–** ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನದಡಿಯಲ್ಲಿ, ಹುಟ್ಟಿನಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆ ಹಾಕುವ ಆಭಿಯಾನ ಡಿಸೆಂಬರ್ 21ರಿಂದ ಆರಂಭವಾಗಿದ್ದು, ಜಿಲ್ಲೆಯ ರಾಯಚೂರು, ಲಿಂಗಸುಗೂರು, ಸಿಂಧನೂರು, ಮಾನವಿ, ದೇವದುರ್ಗ ತಾಲ್ಲೂಕಗಳಲ್ಲಿ ಮೊದಲ ದಿನ ಡಿ.21ರಂದು ಒಟ್ಟು 2,59,984 ಮಕ್ಕಳ ಪೈಕಿ 2,47,052 ಮಕ್ಕಳಿಗೆ ಲಸಿಕೆ ಹಾಕುವ ಮೂಲಕ ಶೇ.95.02 ರಷ್ಟು ಸಾಧನೆ ಮಾಡಲಾಗಿದೆ.

ಡಿಸೆಂಬರ್ 24 ರವರೆಗೆ ಉಳಿದ 12,932 ಮಕ್ಕಳಿಗು ಲಸಿಕೆ ಹಾಕಿ ಒಟ್ಟು 2,60, 002 ಮಕ್ಕಳನ್ನು ತಲುಪಿ ಶೇ.100.02ರಷ್ಟು ಸಾಧನೆ ಮಾಡಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸುರೇಂದ್ರ ಬಾಬು ಅವರು ತಿಳಿಸಿದ್ದಾರೆ.

ಡಿಸೆಂಬರ್ 21 ರಂದು, ಎನ್ ಎಸ್ ಬೋಸರಾಜು, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಕರ್ನಾಟಕ ಸರಕಾರ ಹಾಗೂ ಜಿ. ಕುಮಾರ್ ನಾಯಕ ಸಂಸದರು ರಾಯಚೂರು ಲೋಕಸಭಾ ಕ್ಷೇತ್ರ ಅವರು ಅಭಿಯಾನಕ್ಕೆ ಚಾಲನೆ ನೀಡಿದ್ದರು.

ಗುರಿ ಸಾಧನೆಗಾಗಿ ಜಿಲ್ಲೆಯ ಎಲ್ಲಾ ಮಕ್ಕಳಿಗೂ ಲಸಿಕೆ ಹಾಕುವ ದಿಶೆಯಲ್ಲಿ 601 ಕ್ಲಿಷ್ಟಕರವಾದ ವಸತಿ ಪ್ರದೇಶಗಳನ್ನು, 203 ವಲಸೆ ಜನವಸತಿ ಪ್ರದೇಶಗಳನ್ನು ಗುರುತಿಸಲಾಗಿತ್ತು. ಜಿಲ್ಲೆಯಾದ್ಯಂತ 1132 ಲಸಿಕಾ ಬೂತ್‌ಗಳು 1,133 ಮನೆ ಭೇಟಿ ನೀಡುವ ತಂಡಗಳು, ಹೆಚ್ಚು ಜನಸೇರುವ ಹಾಗೂ ಸಂತೆ–ಮಾರುಕಟ್ಟೆ, ಬಸ್ ನಿಲ್ದಾಣ ಮತ್ತು ಇತರೆ ಜನ ಹೆಚ್ಚು ಸೇರುವ ಸ್ಥಳಗಳಲ್ಲಿ ಲಸಿಕೆ ಹಾಕಲು 53 ತಂಡಗಳು ಮತ್ತು ವಲಸೆ ಪ್ರದೇಶಗಳಾದ ಇಟ್ಟಿಗೆ ಭಟ್ಟಿ, ಕಟ್ಟಡ ಕಾಮಗಾರಿ ಪ್ರದೇಶ, ಕಬ್ಬು ಕಡಿಯುವ ಸ್ಥಳ, ಕುರಿಹಟ್ಟಿ ಮುಂತಾದ ಸ್ಥಳಗಳಲ್ಲಿ



ಲಸಿಕೆ ಹಾಕಲು 33 ಸಂಚಾರಿ ತಂಡಗಳ ಮೂಲಕ ಸಾಧನೆ ಮಾಡಲಾಗಿದೆ.

ಈ ಸಾಧನೆಯನ್ನು ಸಾಧಿಸಲು ಆರೋಗ್ಯ ಇಲಾಖೆಯ ಸಿಬ್ಬಂದಿಯೊಂದಿಗೆ ರಿಮ್ಸ್ ಆಸ್ಪತ್ರೆ, ನವೋದಯ ವೈದ್ಯಕೀಯ ಕಾಲೇಜು, ನಂದಿನಿ, ಎಸ್‌ಕೆಇ ಪ್ಯಾರಾ ಮೆಡಿಕಲ್ ಕಾಲೇಜ್, ರೋಟರಿ, ಲಯನ್ಸ್, ರೆಡ್‌ಕ್ರಾಸ್ ಹಾಗೂ ಇತರೆ ಸಂಘ ಸಂಸ್ಥೆಯವರು ಸ್ವಯಂ ಸೇವಕರಾಗಿ, ಪೋಲಿಯೋ ವ್ಯಾಕ್ಸಿನೇಟರ್ ಆಗಿ ಕಾರ್ಯನಿರ್ವಹಿಸಿದ್ದಾರೆ. ಅಲ್ಲದೇ 248 ಮೇಲ್ವಿಚಾರಕರು ಹಾಗೂ ಡಾ ನಂದೀತಾ ಎಮ್ ಎನ್ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಸೇರಿದಂತೆ ಜಿಲ್ಲೆಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳಾದ ಡಾ.ಗಣೇಶ್, ಡಾ.ಶಿವಕುಮಾರ್, ಡಾ.ಶಾಕೀರ್, ಚಂದ್ರಶೇಖರ್ ನೋಡಲ್ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಿದ್ದು, ಜಿಲ್ಲೆಯಲ್ಲಿ ಸಚಿವರು, ಶಾಸಕರು, ಜನಪ್ರತಿನಿಧಿಗಳು ಹಾಗೂ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯುತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಇವರ ಮಾರ್ಗದರ್ಶನದಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತದ ಸಂಪೂರ್ಣ ಬೆಂಬಲದಡಿ ಮಹಾನಗರ ಪಾಲಿಕೆ, ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯತ, ಗ್ರಾಮ ಪಂಚಾಯತಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯೊಂದಿಗೆ ವಿವಿಧ ಇಲಾಖೆಗಳ ಸಹಕಾರ ಮತ್ತು ಬೆಂಬಲದೊಂದಿಗೆ ಈ ಗುರಿಯುನ್ನು ಸಾಧಿಸಲಾಗಿದೆ. ಇದಕ್ಕಾಗಿ ಶ್ರಮಿಸಿದ ಪ್ರತಿಯೊಬ್ಬರಿಗೂ ಜಿಲ್ಲಾಡಳಿತದ ಪರವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಅಭಿನಂದಿಸುತ್ತದೆ ಎಂದು ಅವರು ತಿಳಿಸಿದ್ದಾರೆ.



# ಬಿರಾದರಗೆ ಕರ್ನಾಟಕ ರಾಜ್ಯೋತ್ಸವ ರತ್ನ ರಾಜ್ಯ ಮಟ್ಟದ ಪ್ರಶಸ್ತಿ



**ಬೀದರ :ಡಿ.26:**ನಗರದ ಪೂಜ್ಯ ಚನ್ನಬಸವ ಪಟ್ಟದೇವರು ಜಿಲ್ಲಾ ರಂಗಮಂದಿರದಲ್ಲಿ ಇತ್ತೀಚೇಗೆ ನಡೆದ ರಾಜ್ಯ ಮಟ್ಟದ ಗಡಿ ಕನ್ನಡಿಗರ ಉತ್ಸವ 70 ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ವಿಶ್ವ ಕನ್ನಡಿಗರ ಸಂಸ್ಥೆ ಕರ್ನಾಟಕ ಹಾಗೂ ವೀರ ಕನ್ನಡಿಗರ ಸೇನೆ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ಪರ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಡಾ. ವಿಶ್ವನಾಥ ಜಿ ಪಿ ಬೆಂಗಳೂರು, ಉದ್ಘಾಟಿಸಿದ ಪಂಚಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೊಡ ಅಧ್ಯಕ್ಷತೆ ವಹಿಸಿದ ಕಾರ್ಯಕ್ರಮದಲ್ಲಿ ಕೃಷಿಯಲ್ಲಿನ ಸೇವೆಗಾಗಿ ಬಸವರಾಜ ಬಿರಾದರವರಿಗೆ ವಿಶ್ವ ಕನ್ನಡಿಗರ ಸಂಸ್ಥೆ ಅಧ್ಯಕ್ಷ ಸುಬ್ಬಣ್ಣ ಕರಕನಳ್ಳಿ, ವೀರ ಕನ್ನಡಿಗರ ಸೇನೆ ರಾಜ್ಯಾಧ್ಯಕ್ಷ ಅಮೃತ ಪಾಟೀಲ್ ರಾಜ್ಯ ಉಪಾಧ್ಯಕ್ಷ ರವಿ ವಂಟೆ ಶಿವರಾಜ ಚಹ್ವಾಣ, ಜಿಲ್ಲಾಧ್ಯಕ್ಷ ಮುಕೇಶ ಶಾಹಗಂಜ್ ಜಿಲ್ಲಾ ಉಪಾಧ್ಯಕ್ಷ ಬಸವರಾಜ ಜಡಗೆ ಪ್ರಧಾನ ಕಾರ್ಯದರ್ಶಿ ಅಂಬಾದಾಸ ಸೈನೆ, ಸಂದೀಪ ಚಾಂಬೋಳ ಗೌಸುದ್ದಿನ ಯಾಕತಪೂರು ಕುಪೇಂದ್ರ ಹೊಸಮನಿ ಬಾಬುರಾವ ಕೆ ಬಿಟ್ಟಿ ಕರ್ನಾಟಕ ರಕ್ಷಣಾ ವೇದಿಕೆ ಕಾವುಲುಪಡೆ ರಾಜ್ಯ ಉಪಾಧ್ಯಕ್ಷ ವಿ ಎಂ ಭಂಗೂರೆ ಜಿಲ್ಲಾಧ್ಯಕ್ಷ ಅವಿನಾಶ ಬುದೇರಾಕರ್ ಕನ್ನಡಿಗರ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಶ್ರೀಕಾಂತ ಭವಾನಿ ಉಪಸ್ಥಿತರಿದರು.

# ಧರ್ಮಸಿಂಗ್ ಜನ್ಮದಿನದಂಗವಾಗಿ ಅನ್ನಸಂತರ್ಪಣೆ



**ಅಫಜಲಪುರ: ಡಿ.26:**ಈ ನಾಡು ಕಂಡ ಜನಪ್ರಿಯ ಮುಖ್ಯಮಂತ್ರಿ ಹಾಗೂ ಅಜಾತಶತ್ರು ಸನ್ಮಾನ್ಯ ದಿ.ಎನ್ ಧರ್ಮಸಿಂಗ ಹುಟ್ಟು ಹಬ್ಬದ ಪ್ರಯುಕ್ತ,ಅನ್ನಸಂತರ್ಪಣೆ ಕಾರ್ಯಕ್ರಮ ಶ್ರೀ ಅಮರಸಿಂಗ ರಜಪೂತ ಅವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮಕ್ಕೆ ಭಾಗವಹಿಸಿ ಅಮರಸಿಂಗ ರಜಪೂತ ಅವರು ಮಾತನಾಡಿ ಈ ಭಾಗದ 371 ಜೆ ಕಲಂ ಜಾರಿಗೆ ರುವಾರಿ ಗಳು ಎನ್ ಧರ್ಮಸಿಂಗ್ ಮತ್ತು ಮಲ್ಲಿಕಾರ್ಜುನ ಖರ್ಗೆ ಯವರು, ಹಲವಾರು ಅಭಿವೃದ್ಧಿ ಕಾಮಗಾರಿಗಳು ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದು. ಅವರ ನೆನಪು ಸದಾ ಉಳಿಯಲಿ ಅವರು ಹಾಕಿ ಕೊಟ್ಟ ಮಾರ್ಗದಲ್ಲಿ ಸಾಗೋಣ ಎಂದು ಹೇಳಿದರು. ಶರಣು ಕುಂಬಾರ ಅಂಬರೀಶ್ ಬುರ್ಲಿ ಮಾತನಾಡಿದರು , ಶಂಕರಸಿಂಗ ರಜಪೂತ ಸ್ವಾಗತಿಸಿದರು. ಈ ಸಂಧರ್ಭದಲ್ಲಿ ಪುರಸಭೆ ಉಪಾಧ್ಯಕ್ಷರಾದ ಶಿವಕುಮಾರ್ ಪದಕಿ ಕಾಂಗ್ರೆಸ್ ಯುವ ಘಟಕದ ಅಧ್ಯಕ್ಷ ಅಣವೀರಯ್ಯ ಮಠಪತಿ , ರಾಜಶೇಖರ್ ಪಾಟೀಲ , ಶಂಕರಸಿಂಗ ರಜಪೂತ,ಸುರೇಶಸಿಂಗ ರಜಪೂತ, ಗೋವಿಂದಸಿಂಗ ಲಾಹೋರಕರ, ವಿಜಯಸಿಂಗ ರಜಪೂತ, ಸಾಗರಸಿಂಗ ಠಾಕೂರ್, ಶಂಕರಸಿಂಗ ಕು. ರಜಪೂತ, ಮಾಣಿಕಸಿಂಗ, ಬಾಲಾಜಿಸಿಂಗ, ಅಜಯ ಸಿಂಗ ರಜಪೂತ , ಅವಿನಾಶಿಂಗ, ಅರ್ಜುನಸಿಂಗ ಇತರ ಸಮಾಜ ಬಾಂಧವರು, ಧರ್ಮಸಿಂಗ್ ಸಾಹೇಬರ ಅಭಿಮಾನಿಗಳು ಭಾಗವಹಿಸಿದ್ದರು.

# ವರ್ಷವಿಡೀ ಖರೀದಿ ಕೇಂದ್ರ ತೆರೆಯಿರಿ: ಕೋಡಿಹಳ್ಳಿ



**ಹೊಸಪೇಟೆ, ಡಿ26:** ರೈತರ ಬೆಳೆಗಳನ್ನು ಸರ್ಕಾರ ವರ್ಷದ 365 ದಿನವೂ ಬೆಂಬಲ ಬೆಲೆಯಲ್ಲಿ ಖರೀದಿಸಲು ಕೇಂದ್ರಗಳನ್ನು ಆರಂಭಿಸಬೇಕು. ಕೃಷಿ ತಜ್ಞ ಎಂ.ಎಸ್.ಸ್ವಾಮಿನಾಥನ್ ಅವರ ವರದಿಯನ್ನು ಯಥಾವತ್ತಾಗಿ ಅನುಷ್ಠಾನಕ್ಕೆ ತರುವ ಮೂಲಕ ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ಒದಗಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಅಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಒತ್ತಾಯಿಸಿದರು.

ಹೊಸಪೇಟೆಯ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷಿ ತಜ್ಞ ಡಾ.ಎಂ.ಎಸ್.ಸ್ವಾಮಿನಾಥನ್ ಅವರು ದಶಕಗಳ ಕಾಲ ಕೃಷಿ ಕ್ಷೇತ್ರದಲ್ಲಿ ಸಂಶೋಧನೆ ನಡೆಸಿ, ದೇಶಾದ್ಯಂತ ಸಂಚರಿಸಿ, ರೈತರ ಬದುಕಿನಲ್ಲಿ ಗುಣಾತ್ಮಕ ಬದಲಾವಣೆ ತರುವ ನಿಟ್ಟಿನಲ್ಲಿ ಮಹತ್ವದ ಶಿಫಾರಸ್ಸುಗಳನ್ನು ಮಾಡಿದ್ದಾರೆ. ರೈತರು ಬೆಳೆಯುವ ಬೆಳೆಗೆ ನಿಜವಾಗಿ ತಗಲುವ ವೆಚ್ಚಕ್ಕೆ ಶೇ.50ರಷ್ಟು ಮೊತ್ತವನ್ನು ಸೇರಿಸಿ (ಸಿ2 + 50) ಬೆಂಬಲ ಬೆಲೆ ನಿಗದಿಪಡಿಸಬೇಕು ಎಂದು ಸಲಹೆ ನೀಡಿದ್ದಾರೆ. ಬಿತ್ತನೆ ಹಾಗೂ ಬೆಳೆ ನಿರ್ವಹಣೆಗೆ ಮಾಡಿದ ವೆಚ್ಚ ಸರಿದೂಗಿಸಿ, ಕೊಂಚ ಲಾಭವೂ ಅನ್ನದಾತನ ಕೈಹಿಡಯಲಿದೆ. ಆದರೆ, ಅದನ್ನು ಜಾರಿಗೆ ತರಬೇಕಿರುವ ಆಳುವ ಸರ್ಕಾರಗಳು ಮೀನಾಮೇಷ ಎಣಿಸುತ್ತಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ರಾಜ್ಯದಲ್ಲಿ ಕನಿಷ್ಠ ಬೆಂಬಲ ಬೆಲೆಯಲ್ಲಿ ಖರೀದಿ ಘೋಷಣೆಯಾಗುತ್ತಿದ್ದಂತೆ ಮುಕ್ತ ಮಾರುಕಟ್ಟೆಯಲ್ಲಿ ಪಾತಾಳಕ್ಕೆ ಕುಸಿದಿದ್ದ ಬೆಲೆಗಳು ಚೇತರಿಸಿಕೊಳ್ಳುತ್ತವೆ. ಆಹಾರ ಧಾನ್ಯಗಳಿಗೆ ಸಂಬಂಧಿಸಿದಂತೆ ಕನಿಷ್ಠ ಬೆಂಬಲ ಬೆಲೆ ಹಾಗೂ ಕಬ್ಬು ಮತ್ತಿತರೆ ವಾಣಿಜ್ಯ ಬೆಳೆಗಳಿಗೆ ಘೋಷಿಸುವ ಎ?ಸ್‌ಅರ್‌ಪಿಯನ್ನು ವೇತನ ಆಯೋಗದ ಮಾದರಿಯಲ್ಲಿ ಕೇಂದ್ರ ಸರ್ಕಾರ ಪ್ರತೀ ವರ್ಷ ಪರಿಷ್ಕರಿಸಬೇಕು. ಎಲ್ಲ ಜಿಲ್ಲೆಯ ಎಪಿಎಂಸಿಗಳಲ್ಲಿ ವರ್ಷವಿಡೀ ಕನಿಷ್ಠ ಬೆಂಬಲ ಬೆಲೆಯಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಬೇಕು. ಅದಕ್ಕಾಗಿ ಕನಿಷ್ಠ 10 ಸಾವಿರ ಕೋಟಿ ರೂ. ಆವರ್ತ ನಿಧಿ ಸ್ಥಾಪಿಸಬೇಕು ಎಂದು ಒತ್ತಾಯಿಸಿದರು.

**ಪವರ್ ಪಾಲಿಟಿಕ್ಸ್‌ಗೆ ಮಣೆ ಹಾಕದಿರಿ:**ರೈತರ ಹೆಸರಲ್ಲಿ ಅಧಿಕಾರದ ಚುಕ್ಕಾಣಿ ಹಿಡಿದ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರಿಂದ ಹಿಡಿದು ಹಿಂದಿನ ಸಿಎಂ ಸಿದ್ದರಾಮಯ್ಯ ವರೆಗೆ ಯಾವೊಬ್ಬ ನಾಯಕನೂ ರೈತರ ಪರ ಗಟ್ಟಿ ನಿರ್ಧಾರಗಳನ್ನು ಕೈಗೊಂಡಿಲ್ಲ. ರೈತರ ನಾಯಕ ಕೆ.ಎಸ್.ಪುಟ್ಟಣ್ಣಯ್ಯ ಅವರ ಪುತ್ರ ದರ್ಶನ್ ಪುಟ್ಟಣ್ಣಯ್ಯ ಅವರು ಕಾಂಗ್ರೆಸ್ ಬೆಂಬಲದೊಂದಿಗೆ ವಿಧಾನಸಭೆ ಪ್ರವೇಶಿಸಿದ್ದರಿಂದ ರೈತರ ಪರ ಧ್ವನಿ ಎತ್ತುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದ ಅವರು, ರೈತರ ಮುಖಂಡರು ರಾಜಕೀಯ ಪಕ್ಷದೊಂದಿಗೆ ಗುರುತಿಸಿಕೊಳ್ಳುವುದರಿದಂದ ನಿಜವಾದ ರೈತರಿಗೆ ನ್ಯಾಯದೊರಕದು. ಈ ಬಗ್ಗೆ ಗಂಭೀರ ಚಿಂತನೆಯಾಗಬೇಕು ಎಂದರು.

ಗೋಷ್ಠಿಯಲ್ಲಿ ರೈತ ಮುಖಂಡ ಖಾಜಾ ಹುಸೇನ್ ನಿಯಾಜಿ, ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಟಿ.ನಾಗರಾಜ್, ತಾಲ್ಲೂಕು ಅಧ್ಯಕ್ಷ ಸಣ್ಣಕ್ಕಿ ರುದ್ರಪ್ಪ, ಮುಖಂಡರಾದ ಆರ್.ಎಲ್.ತಾಯಪ್ಪ, ಹನುಮಂತಪ್ಪ ಹೊಳೆಯಾಚಿ, ಜಡಿಯಪ್ಪ ಉಪಸ್ಥಿತರಿದ್ದರು.

ಸ್ಥಳೀಯ ಬೇಡಿಕೆಗಳಾದ ಟಿಬಿ ಡ್ಯಾಂ ಕ್ರಸ್ಟ್ ಗೇಟ್ ಸಮಸ್ಯೆ, ಹೊಸಪೇಟೆ ಮತ್ತು ಕಂಪ್ಲಿಯ ಸಕ್ಕರೆ ಕಾರ್ಖಾನೆಗಳು ಪುನರ್ ಆರಂಭದ ಬಗ್ಗೆ ಈಗಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಗಮನ ಸೆಳೆದಿದ್ದೇನೆ. ಮುಂದಿನ ದಿನಗಳಲ್ಲಿ ಚಳವಳಿಯನ್ನೂ ರೂಪಿಸಲಾಗುವುದು.

–ಕೋಡಿಹಳ್ಳಿ ಚಂದ್ರಶೇಖರ್, ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ.

**ಮೊದಲನೇ ಪುಟದಿಂದ**

# ಮಹತ್ವ ಪಡೆದ ಸಿಎಂ ದೆಹಲಿ ಭೇಟಿ

ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದರು.

ನಾನು ಪಕ್ಷದಲ್ಲಿ ಎಲ್ಲಾ ಕೆಲಸ ಮಾಡಿದ್ದೇನೆ. ಕಸ ಗುಡಿಸಿದ್ದೇನೆ, ಬಾವುಟ ಕಟ್ಟಿದ್ದೇನೆ. ವೇದಿಕೆ ಮೇಲೆ ನಿಂತು ಭಾಷಣ ಮಾಡುವುದಕ್ಕೆ ಮಾತ್ರ ಸೀಮಿತವಾಗಿಲ್ಲ ಎಂದು ಹೇಳಿಕೆ ನೀಡಿದ್ದು ಅಧಿಕಾರ ಹಂಚಿಕೆಯ ಜಟಾಪಟಿ ಮುಗಿದಿಲ್ಲ, ಜೀವಂತವಾಗಿದೆ ಎನ್ನುವುದನ್ನು ಸಂಕೇತಿಸಿತ್ತು.

ಈ ಎಲ್ಲಾ ಬೆಳವಣಿಗೆಗಳ ಮಧ್ಯೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ರಾತ್ರಿ ವಿಶೇಷ ವಿಮಾನದಲ್ಲಿ ದೆಹಲಿಗೆ ತೆರಳಿ ನಾಳೆ ಕಾಂಗ್ರೆಸ್‌ನ ರಾಷ್ಟ್ರೀಯ ಕಾರ್ಯಕಾರಿಣಿಯಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಅಲ್ಲಿ ಅವರು ರಾಹುಲ್‌ಗಾಂಧಿಯವರನ್ನು ಭೇಟಿ ಮಾಡಿ ಯಾವೆಲ್ಲಾ ವಿಚಾರಗಳನ್ನು ಪ್ರಸ್ತಾಪಿಸಿ ಅಧಿಕಾರ ಹಂಚಿಕೆಯ ಜಟಾಪಟಿಗೆ ತೆರೆ ಎಳೆದು ಸಂಪುಟ ಪುನರ್ ರಚನೆಗೆ ಅನುಮತಿ ಪಡೆಯುತ್ತಾರೆಯೇ ಎಂಬುದು ಕುತೂಹಲ ಮೂಡಿಸಿದೆ.

ನಾಳಿನ ಕಾಂಗ್ರೆಸ್‌ನ ರಾಷ್ಟ್ರೀಯ ಕಾರ್ಯಕಾರಿಣಿಗೆ ಕೆಪಿಸಿಸಿ ಅಧ್ಯಕ್ಷ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರಿಗೆ ಆಹ್ವಾನ ಬಂದಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮಾತ್ರ ಆಹ್ವಾನ ಬಂದಿದೆ. ಹಾಗಾಗಿ ಅವರು ಮಾತ್ರ ದೆಹಲಿಗೆ ತೆರಳುತ್ತಿದ್ದಾರೆ.ದೆಹಲಿಯಲ್ಲಿ ಸಿದ್ದರಾಮಯ್ಯ ಮತ್ತು ವರಿಷ್ಠರ ಭೇಟಿ ಮಹತ್ವ ಪಡೆದುಕೊಂಡಿದ್ದು, ಏನೆಲ್ಲಾ ವಿಚಾರಗಳು ಚರ್ಚೆಯಾಗುತ್ತವೆ, ರಾಜ್ಯ ಕಾಂಗ್ರೆಸ್‌ನ ಎಲ್ಲಾ ಬೆಳವಣಿಗೆಗಳಿಗೂ ನಾಳೆ ತೆರೆ ಬೀಳುತ್ತದೆಯೇ ಎಂಬುದು ಸದ್ಯಕ್ಕಿರುವ ಕುತೂಹಲ.

ಪಕ್ಷದ ನಿರ್ದೇಶನ ಪಾಲನೆ ಕಾರ್ಯಕರ್ತರ ಕರ್ತವ್ಯ

ನಾನು ಪಕ್ಷದ ಸಾಮಾನ್ಯ ಕಾರ್ಯಕರ್ತನಾಗಿಯೇ ಇರುತ್ತೇನೆ ಎಂದು ವೈರಾಗ್ಯದ ಮಾತುಗಳನ್ನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರಿಗೆ ಪರೋಕ್ಷವಾಗಿ ಟಾಂಗ್ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಪುತ್ರ ಹಾಗೂ ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ, ಪಕ್ಷದ ನಿರ್ದೇಶನವನ್ನು ಪಾಲಿಸುವುದು ಕಾರ್ಯಕರ್ತರ ಕರ್ತವ್ಯ ಎಂದಿದ್ದಾರೆ.

ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಸೇರಿದಂತೆ ಯಾರಿಗೂ ಅಧಿಕಾರ ಶಾಶ್ವತವಲ್ಲ. ಪಕ್ಷ ಏನು ನಿರ್ದೇಶನ ನೀಡುತ್ತದೆಯೋ ಅದನ್ನು ಪಾಲಿಸಬೇಕಾದದ್ದು ಎಲ್ಲ ಕಾರ್ಯಕರ್ತರ ಕರ್ತವ್ಯ ಎಂದರು.

ನಾವೆಲ್ಲರೂ ಕೂಡಾ ಸಾಮಾನ್ಯ ಕಾರ್ಯಕರ್ತರಾಗಿ ಕೆಲಸ ಮಾಡಬೇಕು. ಮುಖ್ಯಮಂತ್ರಿಗಳಾಗಲೀ, ಉಪಮುಖ್ಯಮಂತ್ರಿಗಳಾಗಲೀ ಅಥವಾ ಸಾಮಾನ್ಯ ಕಾರ್ಯಕರ್ತರಾಗಲೀ ಎಲ್ಲರೂ ಪಕ್ಷವನ್ನು ಕಟ್ಟುವುದು ಮತ್ತು ಪಕ್ಷದ ಆದೇಶಗಳನ್ನು ಪಾಲಿಸುವುದು ಅವಶ್ಯ. ಇದು ನಮ್ಮೆಲ್ಲರ ಕರ್ತವ್ಯ. ಈ ಜವಾಬ್ದಾರಿಯನ್ನು ನಾವೆಲ್ಲರೂ ನಿರ್ವಹಿಸಬೇಕು ಎಂದು ಅವರು ಮಾರ್ಮಿಕವಾಗಿ ಹೇಳಿದರು. ವಿಧಾನ ಪರಿಷತ್ ಸದಸ್ಯ ಯತೀಂದ್ರರವರ ಈ ಹೇಳಿಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರು ನಾನು ಸಾಮಾನ್ಯ ಕಾರ್ಯಕರ್ತ, ವೇದಿಕೆ ಮೇಲೆ ಭಾಷಣ ಮಾಡುವುದಕ್ಕೆ ಸೀಮಿತವಾಗಿಲ್ಲ, ಪಕ್ಷದ ಬಾವುಟ ಕಟ್ಟಿದ್ದೇನೆ, ಕಸ ಗುಡಿಸಿದ್ದೇನೆ ಎಂಬ ಹೇಳಿಕೆಗೆ ತಿರುಗೇಟು ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಹರಿದಾಡುತ್ತಿವೆ.

# ಕೊಳಗಲ್ಲು ರತ್ನಮ್ಮವ್ವ ಅಂತ್ಯಕ್ರಿಯೆ ವಿವಾದ ಗ್ರಾಮದಲ್ಲಿ ಬಿಗುವಿನ ವಾತಾವರಣ



**ಬಳ್ಳಾರಿ, ಡಿ.26:** ತಾಲೂಕಿನ ಕೊಳಗಲ್ಲು ಗ್ರಾಮದ ಎರ್ರಿತಾತಾ ಮಠದ ಮುಖ್ಯಸ್ಥೆ ರತ್ನಮ್ಮವ್ವಳ ಅಂತ್ಯಕ್ರಿಯೆಯ ಸ್ಥಳದ ಬಗ್ಗೆ ವಿವಾದವಾಗಿದ್ದು. ಈ ಬಗ್ಗೆ ಗ್ರಾಮದಲ್ಲಿ ಬಿಗುವಿನ ವಾತಾವರಣ ಇದೆ. ಪೊಲೀಸ್ ಭದ್ರತೆ ಮಾಡಲಾಗಿದೆ. ಗ್ರಾಮದ ಮುಖಂಡರಲ್ಲಿನ ಭಿನ್ನಾಭಿಪ್ರಾಯ ನ್ಯಾಯಾಲಾಯದ ಈ ಹಿಂದಿನ ಆದೇಶ ಇದಕ್ಕೆ ಕಾರಣವಾಗಿದ್ದು ಈ ಕುರಿತು ಎಸ್ಪಿ ಜಿಲ್ಲಾಡಳಿತದ ಬಳಿ ಗ್ರಾಮದ ಮುಖಂಡರ ಚರ್ಚೆ ನಡೆದಿದೆ.

ರತ್ನಮ್ಮವ್ವ (65) ನಿನ್ನೆ ಸಂಜೆ ನಗರದ ಆಸ್ಪತ್ರೆಯಲ್ಲಿ ದೈವಾಧೀನರಾಗಿದ್ದಾರೆ. ನಂತರ ಅವರ ಪಾರ್ಥೀವ ಶರೀರವನ್ನು ಮಠಕ್ಕೆ ಕೊಂಡಯ್ಯಲಾಗಿದೆ. ಈ ಹಿಂದಿನವರಂತೆ ಇವರ ಅಂತ್ಯಕ್ರಿಯೆಯ ಸಮಾಧಿ ವಿಚಾರಕ್ಕೆ ಗ್ರಾಮದಲ್ಲಿ ಎರಡು ಗುಂಪುಗಳ ಮಧ್ಯೆ ಭಿನ್ನಾಭಿಪ್ರಾಯ ತಲೆದೋರಿದೆ.ಈ ಹಿಂದೆ ಈ ಮಠದ ವಿಷಯ ನ್ಯಾಯಾಲಯದ ಮೆಟ್ಟಿಲೇರಿದೆ. ಆಗ ನ್ಯಾಯಾಲಯ ಯತಾಸ್ಥಿತಿ ಕಾಪಾಡುವಂತೆ ಆದೇಶ ನೀಡಿದೆ. ಇದರಿಂದಾಗಿ ಈಗ ರತ್ನಮ್ಮವ್ವಳ ಸಮಾಧಿ ವಿಷಯ ವಿವಾದಕ್ಕೆ ಎಡೆಯಾಗಿದೆ. ಗ್ರಾಮದ ಬಹುತೇಕ ಜನ ಮಠದಲ್ಲಿಯೇ ಅಂತ್ಯಕ್ರಿಯೆ ಆಗಲಿ ಎಂಬುದಾಗಿದೆ. ಆದರೆ ನ್ಯಾಯಾಲಯದ ಆದೇಶ ಇದಕ್ಕೆ ಅಡ್ಡ ಆಗುತ್ತದೆಂಬುದು ಕೆಲವರ ವಾದವಾಗಿದೆ.

ಈ ಹಿನ್ನಲೆಯಲ್ಲಿ ಕೊಳಗಲ್ಲಿನಲ್ಲಿ ಮೀಸಲು ಪೊಲೀಸ್ ಪಡೆಗಳನ್ನು ಬಂದೋಬಸ್ತ್ ಗೆ ನಿಯೋಜನೆ ಮಾಡಿದೆ. ಸ್ಥಳಕ್ಕೆ ಎಸ್ಪಿ ಶೋಭಾರಾಣಿ ಭೇಟಿ ಪರಿಶೀಲನೆ ಮಾಡಿದ್ದಾರೆ. ಆಗ ಗ್ರಾಮಸ್ಥರು ಈ ವಿವಾದ ಬಗೆಹರಿಸುವಂತೆ ಕೋರಿದ್ದಾರೆ. ಆದರೆ ಎಸ್ಪಿ ಅವರು ಹೀಗೆ ಓಪನ್ ಆಗಿ ಸಭೆ ನಡೆಸಿದರೆ ಒಬ್ಬೊಬ್ಬರು ಒಂದು ಮಾತನಾಡುತ್ತಾರೆ. ಒಮ್ಮತಕ್ಕೆ ಬರುವುದು ಕಷ್ಟ. ಕಚೇರಿಗೆ ಮುಖಂಡರುಗಳು ಬನ್ನಿ ಚರ್ಚೆ ಮಾಡುವ ಎಂದು ಬಂದಿದ್ದರು. ಈ ವೇಳೆ ಎಸ್ಪಿ ಅವರು ಗ್ರಾಮದ ಮುಖಂಡರಿಗೆ ಕೋರ್ಟ್ ನ ಆದೇಶಕ್ಕೆ ಧಕ್ಕೆಯಾಗದಂತೆ ನೀವೆಲ್ಲಾ ಸೇರಿ ಒಮ್ಮತದ ನಿರ್ಧಾರ ತೆಗೆದುಕೊಳ್ಳಿ ಎಂದು ಹೇಳಿ ಕಳುಹಿಸಿದ್ದಾರೆ. ಈಗ ಗ್ರಾಮಸ್ಥರಲ್ಲಿ ಒಂದು ಗುಂಪು ಯಾವುದೇ ಕಾರಣಕ್ಕೆ ನ್ಯಾಯಾಲಯದ ವಿವಾದವಿರುವುದರಿಂದ ದೇವಸ್ಥಾನದ ಆವರಣವನ್ನು ಬಿಟ್ಟು ಬೇರೆಕಡೆ ಅಂತ್ಯಕ್ರಿಯೆ ಮಾಡಲು ಸಮ್ಮತಿಸಿದೆ. ಮತ್ತೊಂದು ಗುಂಪು ದೇವಸ್ಥಾನದ ಮುಂಭಾಗದಲ್ಲಿರುವ ದೇವಸ್ಥಾನಕ್ಕೆ ಸಂಬಂಧಿಸಿದ ನಿವೇಶನದಲ್ಲಿ ಅಂತ್ಯಕ್ರಿಯೆ ಮಾಡುವ ಬಗ್ಗೆ ಚರ್ಚೆ ನಡೆಸಿದೆ. ಅಂತಿಮವಾಗಿ ಯಾವ ನಿರ್ಧಾರಕ್ಕೆ ಬರುತ್ತಾರೆ ಎಂಬುದನ್ನು ಕಾದುನೋಡಬೇಕಿದೆ.

**ಮಠದ ಹಿನ್ನಲೆ:** ಕುರುಬ ಸಮುದಾಯದ ಎರಿತಾತನ ಮಠವಿದೆ. ಈ ಮಠಕ್ಕೆ ಭೂಮಿ ಕೊಟ್ಟವರು ಪರಿಶಿಷ್ಟ ಜಾತಿಗೆ ಸೇರಿದ ಜಡಿಯಪ್ಪನವರು.ಮಠದ ಎರಿತಾತ ಕಾಲವಾದ ಬಳಿಕ ಅವರನ್ನು ಮಠದಲ್ಲಿಯೇ ಸಮಾಧಿ ಮಾಡಲಾಗಿತ್ತು. ಜಮೀನು ನೀಡಿದ ಜಡಿಯಪ್ಪನವರು ಕಾಲವಾದಾಗಲೂ ಅವರನ್ನೂ ಮಠದಲ್ಲಿಯೇ ಅಂತ್ಯಕ್ರಿಯೆ ಮಾಡಲಾಗಿತ್ತು.

ಆ ಬಳಿಕ, ಜಡಿಯಪ್ಪನವರ ಪುತ್ರ ಎರೆಪ್ಪ ತಾತನವರು ಮಠದ ಎರಡನೇ ಪೀಠಾಧಿಪತಿಯಾಗಿದ್ದರು. ಎರೆಪ್ಪ ತಾತ ಕಾಲವಾದಾಗ ಅವರನ್ನು ಮೊದಲ ಪೀಠಾಧಿಪತಿ ಎರಿತಾತನವರ ಪಕ್ಕದಲ್ಲೇ ಸಮಾಧಿ ಮಾಡಲಾಗಿತ್ತು. ರತ್ನಮ್ಮವ್ವನವರು ಎರಡನೇ ಪೀಠಾಧಿಪತಿ ಎರೆಪ್ಪ ತಾತನವರ ಪತ್ನಿ ಇದೀಗ ದೈವಾಧೀನರಾಗಿದ್ದಾರೆ.

ಪತಿ ಎರೆಪ್ಪ ತಾತನವರ ಸಮಾಧಿ ಪಕ್ಕದಲ್ಲೇ ರತ್ನಮ್ಮವ್ವ ಅವರ ಸಮಾಧಿ ಮಾಡಬೇಕು ಎಂಬುದು ಒಂದು ಗುಂಪಿನ ವಾದ. ಆದರೆ, ಇದನ್ನು ಮತ್ತೊಂದು ಗುಂಪು ವಿರೋಧಿಸುತ್ತಿದೆ. ಮಠವನ್ನು ಹೊರತುಪಡಿಸಿ ಬೇರೆಲ್ಲಾದರೂ ಸಮಾಧಿ ಮಾಡಲಿ ಎಂಬ ಒತ್ತಾಯ ಕೇಳಿ ಬಂದಿದೆ.

# ವಾಜಪೇಯಿ ಜನ್ಮದಿನೋತ್ಸವ

**ಹೊಸಪೇಟೆ, ಡಿ26**:ವಿಜಯನಗರ: ಹೊಸಪೇಟೆಯ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಗುರುವಾರ ಮಾಜಿ ಪ್ರಧಾನಿ, ಅಜಾತಶತ್ರು ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನದ ಶತಮಾನೋತ್ಸವವನ್ನು ಆಚರಿಸಲಾಯಿತು. ನಗರಸಭೆ ಉಪಾಧ್ಯಕ್ಷ ಬಿ.ಜೀವರತ್ನ, ಹೊಸಪೇಟೆ ಮಂಡಲ ಅಧ್ಯಕ್ಷ ಶಂಕರ್ ಮೇಟಿ, ಅಶೋಕ್ ಜೀರೆ, ವಿದ್ವಾನ್ ಕೆ.ಎಸ್. ರಾಘವೇಂದ್ರ, ಕಾಸಟಿ ಉಮಾಪತಿ, ಶಶಿಧರ್ ಸ್ವಾಮಿ, ರೇವಣಸಿದ್ದಪ್ಪ, ಜೆ.ಆರ್ ಮಧುಸೂದನ್, ಆರ್.ಶ್ರೀನಿವಾಸ್. ಮಧುರ ಚೆನ್ನ ಶಾಸ್ತ್ರಿ ಹಿರೇಮಠ. ಎಚ್ ನಟರಾಜ್ ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.



# ದೇಶದ ಸವಾಲುಗಳಿಗೆ ಸಮಗ್ರ ಪರಿಹಾರ ಅಗತ್ಯ



**ಕಲಬುರಗಿ : ಡಿ.26:**ಭಾರತವು ಬಡತನ, ನಿರುದ್ಯೋಗ, ಅಸಮಾನತೆ, ಭ್ರಷ್ಟಾಚಾರ, ಪರಿಸರ ಮಾಲಿನ್ಯ, ಶಿಕ್ಷಣದ ಗುಣಮಟ್ಟದ ಕೊರತೆ, ಜಾತೀಯತೆ, ಪ್ರಾಂತಿಯತೆ, ಭಾಷಾ ತಾರತಮ್ಯ ಮತ್ತು ಲಿಂಗ ತಾರತಮ್ಯದಂತಹ ಗಂಭೀರ ಸವಾಲುಗಳನ್ನು ಎದುರಿಸುತ್ತಿದೆ. ಇವುಗಳನ್ನು ಪರಿಹರಿಸಲು ಸುಸ್ಥಿರ ಆರ್ಥಿಕ ಅಭಿವೃದ್ಧಿ, ಕಟ್ಟುನಿಟ್ಟಾದ ಕಾನೂನುಗಳ ಅನುಷ್ಠಾನ, ಸಾರ್ವಜನಿಕರಲ್ಲಿ ಜಾಗೃತಿ, ಡಿಜಿಟಲ್ ಕ್ರಾಂತಿ, ಮಹಿಳಾ ಸಬಲೀಕರಣ ಮತ್ತು ಕೌಶಲ್ಯ ಅಭಿವೃದ್ಧಿಯಂತಹ ಸಮಗ್ರ ಪರಿಹಾರಗಳ ಅಗತ್ಯವಿದೆ ಎಂದು ಉಪನ್ಯಾಸಕ ಮಲ್ಲಿಕಾರ್ಜುನ ದೊಡ್ಡಮನಿ ಹೇಳಿದರು.

ಜೇವರ್ಗಿ ಪಟ್ಟಣದ ಬಸವೇಶ್ವರ ವೃತ್ತದ ಸಮೀಪದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಎನ್.ಎಸ್.ಎಸ್ ವಾರ್ಷಿಕ ವಿಶೇಷ ಶಿಬಿರದ ಮೂರನೇ ದಿನವಾದ ಬುಧವಾರ ಜರುಗಿದ "ಭಾರತ ಎದುರಿಸುತ್ತಿರುವ ಸವಾಲುಗಳು ಮತ್ತು ಪರಿಹಾರೋಪಾಯಗಳು" ಎಂಬ ವಿಷಯದ ಬಗ್ಗೆ ವಿಶೇಷ ಉಪನ್ಯಾಸ ನೀಡುತ್ತಾ, ಅವರು ಮಾತನಾಡಿದರು. ಪ್ರಾಚಾರ್ಯ ರವೀಂದ್ರಕುಮಾರ ಸಿ. ಬಟಗೇರಿ, ಉಪನ್ಯಾಸಕ ಮಲ್ಲಪ್ಪ ರಂಜಣಗಿ ಮಾತನಾಡುತ್ತಾ, ಮಾನವನ ದುರಾಸೆಯಿಂದ ದೇಶದ ಅಭಿವೃದ್ಧಿಗೆ ತೊಡಕಾಗಿದೆ. ಎಲ್ಲರು ಕೂಡಾ ವಾಸ್ತವಿಕತೆಯನ್ನು ಅರಿತುಕೊಂಡು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಿದರೆ, ಸಮಸ್ಯೆಗಳಿಗೆ ಪರಿಹಾರವಿದೆ ಎಂದು ಮಾರ್ಮಿಕವಾಗಿ ನುಡಿದರು. ಕಾರ್ಯಕ್ರಮದಲ್ಲಿ ಎನ್.ಎಸ್.ಎಸ್ ಅಧಿಕಾರಿ ಎಚ್.ಬಿ.ಪಾಟೀಲ್, ಗ್ರಂಥಪಾಲಕ ಲಿಂಗರಾಜ ಹಿರೇಗೌಡ, ಅತಿಥಿ ಉಪನ್ಯಾಸಕ ನಾರಾಯಣಸ್ವಾಮಿ, ದ್ವಿದಸ ರಾಮಚಂದ್ರ ಚವ್ಹಾಣ ಹಾಗೂ ಶಿಬಿರಾರ್ಥಿಗಳು ಇದ್ದರು. ಶಾರದಾ ನಿರೂಪಿಸಿ, ವಂದಿಸಿದಳು.

# ರೈತರು ಸಮಗ್ರ ಹಾಗೂ ವೈಜ್ಞಾನಿಕ ಕೃಷಿ ಪದ್ಧತಿ ಅಳವಡಿಸಿಕೊಳ್ಳಿ

**ಕಲಬುರಗಿ:ಡಿ.26:** ರೈತರು ಯಾವುದೇ ಒಂದು ಬೆಳೆಯ ಮೇಲೆ ಸಂಪೂರ್ಣವಾಗಿ ಅವಲಂಬಿಸಬಾರದು. ವಿವಿಧ ಬೆಳೆಗಳು, ತರಕಾರಿ, ಹಣ್ಣುಗಳು, ಹೂವುಗಳ ಕೃಷಿ ಮಾಡಬೇಕು. ಒಂದು ವೇಳೆ ಒಂದು ಬೆಳೆ ವಿಫಲವಾದರೆ, ಮತ್ತೊಂದು ಬೆಳೆಯಲು ಮತ್ತು ವರ್ಷಪೂರ್ತಿ ಇಳುವರಿ ಸಾಧ್ಯವಾಗುತ್ತದೆ. ಸಾವಯುವ ಗೊಬ್ಬರದ ವ್ಯಾಪಕ ಬಳಕೆ, ಬೀಜೋಪಚಾರ, ಹೊಸ ತಂತ್ರಜ್ಞಾನದ ಬಳಕೆ, ಸುಧಾರಿತ ಬೀಜಗಳ ಬಳಕೆ, ನಿಯಮಿತವಾಗಿ ಮಣ್ಣಿನ ಪರೀಕ್ಷೆ, ಕೃಷಿಯ ಜೊತೆ ಹೈನುಗಾರಿಕೆ, ತೋಟಗಾರಿಕೆ, ಕೋಳಿ, ಕುರಿ ಸಾಕಾಣಿಕೆಯ ಸಮಗ್ರ ಹಾಗೂ ವೈಜ್ಞಾನಿಕ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು ಎಂದು ನಿವೃತ್ತ ಕೃಷಿ ಅಧಿಕಾರಿ, ಕೃಷಿಕ ಸಮಾಜದ ಸದಸ್ಯ ಶಿವಯೋಗೆಪ್ಪಾ ಎಸ್.ಬಿರಾದಾರ ರೈತರಿಗೆ ಸಲಹೆ ನೀಡಿದರು.

ಹೆಬ್ಬಾಳ ವ್ಯಾಪ್ತಿಯ ತೋಟವೊಂದರಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಮಂಗಳವಾರ ಏರ್ಪಡಿಸಲಾಗಿದ್ದ 'ರಾಷ್ಟ್ರೀಯ ರೈತ ದಿನಾಚರಣೆ : ಚೌಧರಿ ಚರಣಸಿಂಗ್‌ರಿಗೆ ನಮನ, ಪ್ರಗತಿಪರ ರೈತರಿಗೆ ಸತ್ಕಾರ, ರೈತರಿಗೆ ಸಲಹೆಗಳು' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಳಗದ ಅಧ್ಯಕ್ಷ, ಉಪನ್ಯಾಸಕ ಎಚ್.ಬಿ.ಪಾಟೀಲ ಮಾತನಾಡಿ, ದೇಶದ ಐದನೇ ಪ್ರಧಾನಿ ಚೌಧರಿ ಚರಣಸಿಂಗ್ ಅವರ ಜನ್ಮದಿನವನ್ನು 'ರಾಷ್ಟ್ರೀಯ ರೈತರ ದಿನಾಚರಣೆ'ಯನ್ನಾಗಿ ಆಚರಿಸಲಾಗುತ್ತದೆ. ಅವರು ತಮ್ಮ ಆಡಳಿತದಲ್ಲಿ ರೈತಪರ ನೀತಿ, ಯೋಜನೆಗಳನ್ನು ಜಾರಿಗೊಳಿಸಿ, ದಿನಾಚರಣೆಯ



ರೂವಾರಿಯಾಗಿದ್ದಾರೆ. ರೈತರು ಕೃಷಿ ವಿಜ್ಞಾನಿಗಳು, ಕೃಷಿ ಪಂಡಿತರು ಮತ್ತು ಪ್ರಗತಿಪರ ರೈತರಿಂದ ಸೂಕ್ತ ಮಾಹಿತಿಯನ್ನು ಪಡೆದು, ಕೃಷಿಯಲ್ಲಿ ತೊಡಗಿದರೆ ಹೆಚ್ಚಿನ ಇಳುವರಿ ಪಡೆಯಲು ಸಾಧ್ಯವಾಗುತ್ತದೆ. ರೈತ ದೇಶದ ಬೆನ್ನೆಲಬು ಹಾಗೂ ನೈಜ ದಾಸೋಹಿ. ಆತನ ಋಣ ತೀರಿಸಲು ಸಾಧ್ಯವಿಲ್ಲ. ಕೃಷಿ ಅಭಿವೃದ್ಧಿಗೆ ಪೂರಕವಾದ ನೀತಿಗಳು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕಾಗಿದೆ. ರೈತರು ಯಾವುದೇ ಕಾರಣಕ್ಕೂ ಧೃತಿಗೆಡದೆ, ಆತ್ಮಹತ್ಯೆಯ ದಾರಿ ತುಳಿಯಬಾರದು ಎಂದರು.

ಪ್ರಗತಿಪರ ರೈತರಾದ ಸಂಗಣ್ಣ ಚಂಡ್ರಾಸಿ, ಬಸವರಾಜ ದೇಸಾಯಿ, ವಿಜಯಲಕ್ಷ್ಮೀ ಕಲ್ಲಬೇನೂರ್, ಗುಂಡಮ್ಮ ಚಂಡ್ರಾಸಿ ಅವರಿಗೆ ಸತ್ಕರಿಸಿ, ಗೌರವಿಸಲಾಯಿತು. ರೈತರಾದ ಶಿವಾನಂದ, ಚನ್ನವೀರ, ಮಿನ್ನಪ್ಪ ಕೊರಬಾ ಸೇರಿದಂತೆ ಇನ್ನಿತರರಿದ್ದರು.

# ಮಹಾನಗರ ಪಾಲಿಕೆಯಿಂದ ಆಕ್ಷೇಪಣೆಗೆ ಅರ್ಜಿ ಆಹ್ವಾನ

**ರಾಯಚೂರು ಡಿ,26:** ಇಲ್ಲಿನ ಮಹಾನಗರ ಪಾಲಿಕೆಯ ವಾರ್ಡ್ ನಂ.35 ನಿವೇಶನ ಮುನ್ಸಿಪಾಲ್ ನಂ.1-11-49/35/1 & 1-11-49/37/2ರಲ್ಲಿ ಡಾ.ನರಸಿಂಹಲು ನಂದಿನಿ ಮೆಮೊರೇಬಲ್ ಟ್ರಸ್ಟ್, ಶಿಕ್ಷಣ ಸಂಸ್ಥೆ, ಕಟ್ಟಡ ನಿರ್ಮಾಣ ಮಾಡಲು ಡಾ.ಶ್ರೀನರಸಿಂಹಲು ನಂದಿನಿ ಅವರು ಅರ್ಜಿ ಸಲ್ಲಿಸಿದ್ದು, ಅಕ್ಕ-ಪಕ್ಕದ ಹಾಗೂ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆ ಇದ್ದಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ಲಿಖಿತವಾಗಿ ಸಲ್ಲಿಸಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ಈ ಜಮೀನು ಶೈಕ್ಷಣಿಕ ಉದ್ದೇಶಕ್ಕಾಗಿ ಏಕ ನಿವೇಶನ ಅನುಮೋದನೆಯನ್ನು ಮಾನ್ಯ ಜಿಲ್ಲಾಧಿಕಾರಿಗಳಿಂದ ಪಡೆದುಕೊಂಡಿರುತ್ತದೆ. ಮತ್ತು ನಗರಾಭಿವೃದ್ಧಿ ಪ್ರಾಧಿಕಾರದಿಂದ ಮತ್ತು ನಗರಸಭೆಯಿಂದ ಅನುಮತಿ ಪಡೆದಿರುತ್ತಾರೆ. ಈ ಕಚೇರಿಯಿಂದ ಆಸ್ತಿತೆರಿಗೆ ವಿನಾಯಿತಿ ಪಡೆದುಕೊಂಡಿದ್ದು, ಈ ಸ್ಥಳದಲ್ಲಿ ನಕ್ಷೆ ಪ್ರಕಾರ ಕಟ್ಟಡ ಪರವಾನಿಗೆ ಕೋರಿ ಅರ್ಜಿಸಲ್ಲಿಸಿರುವುದರಿಂದ ಇದಕ್ಕೆ ಅಕ್ಕ-ಪಕ್ಕದ ಹಾಗೂ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆ ಇದ್ದಲ್ಲಿ 15 ದಿನಗಳ ಒಳಗಾಗಿ ದಾಖಲೆಯೊಂದಿಗೆ ಈ ಕಾರ್ಯಾಲಯಕ್ಕೆ ದೂರು ಸಲ್ಲಿಸತಕ್ಕದ್ದು, ಅವಧಿ ಮುಗಿದ ನಂತರ ಬಂದ ಆಕ್ಷೇಪಣೆ, ತಕರಾರರನ್ನು ಪರಿಗಣಿಸಲಾಗುವುದಿಲ್ಲವೆಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮೀಣ ಪ್ರದೇಶದಲ್ಲಿ ಡಿಸೆಂಬರ್ 29ರಂದು ವಿದ್ಯುತ್ ವ್ಯತ್ಯಯ

**ರಾಯಚೂರು ಡಿ,26:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಮಲಿಯಾಬಾದ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಡಿಸೆಂಬರ್ 29ರ ಬೆಳಗ್ಗೆ 10 ಗಂಟೆಯಿಂದ ಸಾಯಂಕಾಲ 05 ಗಂಟೆವರೆಗೆ ಗ್ರಾಮೀಣ ಮಲಿಯಾಬಾದ ವಿದ್ಯುತ್ ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಸೆಂಬರ್ 31ರಂದು ಡಾಕ್ ಅದಾಲತ್

**ರಾಯಚೂರು ಡಿ,26:** ರಾಯಚೂರು ವಿಭಾಗೀಯ ಡಾಕ್ ಅದಾಲತ್‌ನ್ನು ರಾಯಚೂರು ವಿಭಾಗದ ಅಂಚೆ ಕಚೇರಿಗಳ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಡಿಸೆಂಬರ್ 31ರ ಬೆಳಗ್ಗೆ 11 ಗಂಟೆಗೆ ನಗರದ ಕನಕದಾಸ ವೃತ್ತದ ಬಳಿಯಲ್ಲಿರುವ ಅಂಚೆ ಕಚೇರಿಗಳ ಅಧೀಕ್ಷಕರ ಕಚೇರಿಯಲ್ಲಿ ನಡೆಯಲಿದೆ.

ಸಾರ್ವಜನಿಕರು ಅಂಚೆ ಸೇವೆಗಳ ಬಗ್ಗೆ ತಮ್ಮ ದೂರುಗಳನ್ನು ಡಿಸೆಂಬರ್ 30ರೊಳಗೆ, ಅಂಚೆ ಕಚೇರಿಗಳ ಅಧೀಕ್ಷಕರ ಕಾರ್ಯಾಲಯ, ರಾಯಚೂರು ವಿಭಾಗ 584102ಗೆ ಸಲ್ಲಿಸಬೇಕು ಎಂದು ಅಂಚೆ ಕಚೇರಿಯ ಅಧೀಕ್ಷಕರ ಕಚೇರಿಯ ಪ್ರಕಟಣೆ ತಿಳಿಸಿದೆ.

### ನೇತಾಜಿ ಕೆರಿಯರ್ ಅಕ್ಯಾಡೆಮಿ ಉದ್ಘಾಟನೆ.

# ಪಿ.ಯು. ಹಂತದಲ್ಲೇ ಶಿಕ್ಷಣದ ಜೊತೆಗೆ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ- ಕೆ.ಈ.ನರಸಿಂಹ.

ಧೈರ್ಯದ ದಾರಿ



**ಮಾನ್ವಿ,ಡಿ.26:** ಪಿ.ಯು.ಹಂತದಲ್ಲೇ ಕಲಿಕೆಯ ಜೊತೆಗೆ ವಿದ್ಯಾರ್ಥಿ ಗಳ ಭವಿಷ್ಯತ್ತಿಗೆ ಭದ್ರ ಬುನಾದಿ ಹಾಕುವ ದೃಷ್ಟಿಯಿಂದ ಸ್ಪರ್ಧಾತ್ಮಕ ಪರೀಕ್ಷೆ ಗೆ ಮಾರ್ಗದರ್ಶನ ನೀಡುವ ಉದ್ದೇಶದಿಂದ ನೇತಾಜಿ ಕೆರಿಯರ್ ಆಕ್ಯಾಡೆಮಿ ಆರಂಭಿಸಲಾಗಿದೆ ಎಂದು ನೇತಾಜಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಕೆ.ಈ.ನರಸಿಂಹ ಹೇಳಿದರು.

ಅವರು ಇಂದು ನೇತಾಜಿ ಶಿಕ್ಷಣ ಸಂಸ್ಥೆಯ ಲ್ಲಿ ಆರಂಭಿಸಲಾದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ ಉದ್ಘಾಟಿಸಿ ಮಾತನಾಡಿದರು.

ಇದು ಸಂಸ್ಥೆಯ ಬಹುದಿನಗಳ ಕನಸು.ಗ್ರಾಮೀಣ ಭಾಗದ ರೈತ ಕುಟುಂಬದ ವಿದ್ಯಾರ್ಥಿ ಗಳಿಗೆ ಅನುಕೂಲ ವಾಗಲಿ ಎಂದು ಈ ಅಕ್ಯಾಡೆಮಿ ಆರಂಭಿಸಲಾಗಿದೆ. ಅನುಭವಿ ಸಂಪನ್ಮೂಲ ವ್ಯಕ್ತಿ ಗಳಿಂದ ಮತ್ತು ಈಗಾಗಲೇ ಉದ್ಯೋಗ ಪಡೆದ ಅಧಿಕಾರಿಗಳಿಂದ ಮಾರ್ಗದರ್ಶನ ನೀಡಲಾಗುತ್ತದೆ. ಪ್ರತಿ ಶುಕ್ರವಾರ ಮತ್ತು ಶನಿವಾರ ಮಧ್ಯಾಹ್ನ 2 ಗಂಟೆ ಯಿಂದ ಸಂಜೆ 4 ಗಂಟೆ ವರೆಗೆ ತರಗತಿ ನಡೆಯುತ್ತವೆ. ಈ ತರಬೇತಿ ಸಂಪೂರ್ಣ ಉಚಿತ ವಾಗಿದ್ದು ಮಾನ್ವಿ ಪಟ್ಟಣ ಹಾಗೂ ಸುತ್ತಲಿನ ಹಳ್ಳಿಯ ಪಿ.ಯು.ಮತ್ತು ಡಿಗ್ರಿ ಅಭ್ಯಾಸ ಮಾಡುವ ವಿದ್ಯಾರ್ಥಿ ಗಳು ಇದರ ಉಪಯೋಗ ಪಡೆದುಕೊಳ್ಳಬೇಕು.ಎಸ್.ಡಿ.ಎ., ಎಫ್.ಡಿ.ಎ. ಶಿಕ್ಷಕ ಉಪನ್ಯಾಸ ಕ, ,ಬ್ಯಾಂಕಿಂಗ್, ಪೋಲೀಸ್ ಇಲಾಖೆ, ಕಂದಾಯ ಇಲಾಖೆ, ಆಡಳಿತಾತ್ಮಕ ಇಲಾಖೆ ಯ ಕ್ಲಾಸ್‌ನ , ಕ್ಲಾಸ್ ಟು, ಸೇರಿದಂತೆ ಎಲ್ಲ ಸ್ಪರ್ಧಾತ್ಮಕ ಪರೀಕ್ಷೆ ಯ ತಯ್ಯಾರಿ ಗೆ ತರಬೇತಿ ನೀಡಲಾಗುತ್ತದೆ ಎಂದು ಅವರು ಹೇಳಿದರು.ಈ

ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಕೆ.ವಿಜಯಲಕ್ಷ್ಮಿ, ಸಹ ಕಾರ್ಯದರ್ಶಿ ಕೆ.ರವಿವರ್ಮ, ತರಬೇತಿ ದಾರರಾದ ಹೆಚ್.ಟಿ.ನಾಯಕ, ಹುಸೇನ್ ಭಾಷಾ, ಆಂಜನೆಯ್ಯ ಹಾಗೂ ಉಪನ್ಯಾಸ ಕರಾದ ಆರೀಫ್, ಚಂದ್ರು ಜಾದವ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



ಧೈರ್ಯದ ದಾರಿ

**ಮಾನ್ವಿ ತಾಲೂಕಿನ ಖಾಸಗಿ ಶಿಕ್ಷಣ ಸಂಸ್ಥೆ ಗಳ ಒಕ್ಕೂಟದ ರಾಜಾ ಸುಭಾಷ್ ಚಂದ್ರ ನಾಯಕ ದೊರೆ ಅವರು ಅಧ್ಯಕ್ಷರಾಗಿ ಮೊದಲ ಬಾರಿಗೆ ಶ್ರೀ ಆರೂಢ ಜ್ಯೋತಿ ಶಾಂತಾಶ್ರಮ ಹುಬ್ಬಳ್ಳಿ ಶ್ರೀ ಗಳಿಂದ ಮತ್ತು ನೀರಮಾನ್ವಿ ಯ ಶ್ರೀ ಸದ್ಗುರು ಸಿದ್ಧಾರೂಢ ಮಠದಲ್ಲಿ ಆಶೀರ್ವಾದ ಪಡೆದಿದ್ದು.**

# ಅಂತಿಮ ಆಯ್ಕೆ ಪಟ್ಟಿಯಲ್ಲಿ ಗ್ರಾಮೀಣ ಪ್ರದೇಶ ಯುವಕರು ಅಗ್ನಿ ವೀರ ಸೇನೆಗೆ ಆಯ್ಕೆ

ಧೈರ್ಯದ ದಾರಿ

**ಮಾನ್ವಿ ,ಡಿ.25-** ತಾಲೂಕಿನ ಗ್ರಾಮೀಣ ಪ್ರದೇಶದ ಸರಕಾರಿ ಕನ್ನಡ ಶಾಲೆಗಳಲ್ಲಿ ಅಭ್ಯಾಸ ಮಾಡಿದ ಅಪ್ಪಟ ಹಳ್ಳಿಯ ಯುವಕರು ರಾಯಚೂರಿನಲ್ಲಿ ನಡೆದ ಅಗ್ನಿವೀರ್ ಸೇನಾ ನೇಮಕಾತಿಯಲ್ಲಿ ನೇಮಕವಾಗಿ ತಾಲೂಕಿನ ಹಾಗೂ ಗ್ರಾಮೀಣ ಪ್ರದೇಶದ ಸರಕಾರಿ ಶಾಲೆಗಳ ಘನತೆ ಹೆಚ್ಚಿಸಿದ್ದಾರೆ ಸರಕಾರಿ ಶಾಲೆಗಳ ಮುಖ್ಯೋಪಾಧ್ಯಾಯರು ಹರ್ಷ ವ್ಯಕ್ತಪಡಿಸಿದ್ದಾರೆ. ಜೊತೆಗೆ ಈಗ ಈ ಯುವಕರು ಪ್ರತಿಷ್ಠಿತ ಸರಕಾರಿ ಹಾಗೂ ಖಾಸಗಿ ಕಾಲೇಜುಗಳಲ್ಲಿ ಪದವಿಯಲ್ಲಿ ಅಭ್ಯಾಸ ಮಾಡುತ್ತಿದ್ದಾರೆ.

ಈ ಯುವಕರು ಅಭ್ಯಾಸದ ಜೊತೆಗೆ ವ್ಯವಸಾಯದಲ್ಲಿಯೂ ಕೂಡ ತಂದೆಯವರ ಜೊತೆಗೆ ಸಹಾಯ ಮಾಡು ತ್ತಿದ್ದರು. ಸೈನಿಕ ಹುದ್ದೆಗೆ ನೇಮಕವಾದ ಯುವಕರು ಚೆನ್ನಬಸವ ನಾಯಕ ಬ್ಯಾಗವಾಟ,ರಾಮಚಂದ್ರ ಕನ್ನೇರಿ ನೀರಮಾನ್ವಿ, ಭೀಮಣ್ಣ ನಾಯಕ ರಾಜಲದಿನ್ನಿ, ಶಿವಕುಮಾರ ನಾಯಕ ನಕ್ಕುಂದಿ, ಯಲ್ಲಪ್ಪ ಕರಡಿ ಆಲ್ದಾಳ ಹಾಗೂ ಬೀರಪ್ಪ ಕೊರವಿ ಈ ಎಲ್ಲಾ ಹಳ್ಳಿಯ ಯುವಕರು ಕಠಿಣ ಪೂರ್ವ ತರಬೇತಿ ಅತ್ಯಂತ



ಯಶಸ್ವಿಗೊಳಿಸಲೆಂದು ಮಾನ್ವಿ ತಾಲೂಕಿನ ದೇಶಭಕ್ತರು ತಾಲೂಕ ಖಾಸಗಿ ಕಾಲೇಜುಗಳ ಉಪನ್ಯಾಸಕರ ಸಂಘದ ಅಧ್ಯಕ್ಷರಾದ ಆಂಜನೇಯ ನಸಲಾಪುರ ಹಾಗೂ ಅಂಬಣ್ಣ ನಾಯಕ ಗುಜ್ಜಲ್ ರಾಜ್ಯಾಧ್ಯಕ್ಷರು ಕರ್ನಾಟಕ ರಾಜ್ಯ ಬೇಡರ ಸಮಿತಿ ಬೆಂಗಳೂರು ಹಾಗೂ ಕಾರ್ಯಕಾರಿಣಿ ಸಮಿತಿ ಸದಸ್ಯರು ಶುಭ ಹಾರೈಸಿದ್ದಾರೆ

# ಚಾಗಭಾವಿ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಹಾಗೂ ವಿಕಲಚೇತನರ ಸಮನ್ವಯ ಸಭೆ




ಧೈರ್ಯದ ದಾರಿ

**ಸಿರವಾರ,ಡಿ.26:** ತಾಲೂಕಿನ ಚಾಗಭಾವಿ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ಜಿಲ್ಲಾಧಿಕಾರಿಗಳ ಕಾರ್ಯಾಲಯ ನಗರಾಭಿವೃದ್ಧಿ ಕೋಶ, ರಾಯಚೂರು, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ರಾಯಚೂರು ಹಾಗೂ ಗ್ರಾಮ ಪಂಚಾಯತ್ ಕಾರ್ಯಾಲಯ, ಚಾಗಭಾವಿ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಹಾಗೂ ವಿಕಲಚೇತನರ ಸಮನ್ವಯ ಸಭೆ ಅತ್ಯಂತ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಂಕಲ್ಪ ವಿಕಲಚೇತನರ ಒಕ್ಕೂಟದ ಗೌರವಾಧ್ಯಕ್ಷರಾದ ದೇಸಾಯಿ ದೊತರಬಂಡಿ ಅವರು, ವಿಶ್ವ ವಿಕಲಚೇತನರ ದಿನಾಚರಣೆಯ ಮಹತ್ವವನ್ನು ವಿವರಿಸಿದರು. ವಿಕಲಚೇತನರ ಬಗ್ಗೆ ಸಮಾಜದಲ್ಲಿ ಬಳಸಲಾಗುವ ಅವಮಾನಕಾರಿ ಹಾಗೂ ನೋವುಂಟುಮಾಡುವ ಪದಗಳನ್ನು ಸಂಪೂರ್ಣವಾಗಿ ತ್ಯಜಿಸಬೇಕೆಂದು ಅವರು ಮನವಿ ಮಾಡಿದರು. ವಿಕಲಚೇತನರು ಸಹ ಸಮಾನ ಗೌರವ, ಹಕ್ಕು ಹಾಗೂ ಅವಕಾಶಗಳಿಗೆ ಅರ್ಹರಾಗಿದ್ದು, ಗೌರವಪೂರ್ಣ ಭಾಷೆ ಮತ್ತು ಮಾನವೀಯ ವರ್ತನೆಯೇ ನಿಜವಾದ ಸಬಲೀಕರಣಕ್ಕೆ ದಾರಿ ಎಂದು ತಿಳಿಸಿದರು.

ಸಮನ್ವಯ ಸಭೆಯಲ್ಲಿ ವಿಕಲಚೇತನರ ಹಕ್ಕುಗಳು, ಸರ್ಕಾರದಿಂದ ದೊರೆಯುವ ಸೌಲಭ್ಯಗಳು, ಪುನರ್ವಸತಿ ಕ್ರಮಗಳು, ಸಾಮಾಜಿಕ ಒಗ್ಗಟ್ಟು ಹಾಗೂ ಜಾಗೃತಿ ಕುರಿತು ಸವಿಸ್ತಾರ ಚರ್ಚೆ ನಡೆಯಿತು. ವಿಕಲಚೇತನರನ್ನು ಕೇವಲ ಸಹಾನುಭೂತಿಯಿಂದ ಅಲ್ಲ, ಗೌರವ ಮತ್ತು ಸಮಾನತೆಯ ದೃಷ್ಟಿಯಿಂದ ನೋಡುವ ಮನೋಭಾವ ಸಮಾಜದಲ್ಲಿ ಬೆಳೆಸಬೇಕೆಂಬ ಸಂದೇಶವನ್ನು ಕಾರ್ಯಕ್ರಮ ನೀಡಿತು.

ಈ ಸಂದರ್ಭದಲ್ಲಿ ಪಂಚಾಯತಿ ಕರ ವಸಲಿಗಾರರಾದ ಮಲ್ಲಯ್ಯ, ಸಂಕಲ್ಪ ವಿಕಲಚೇತನರ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಶಿವಕುಮಾರ್ ಚಲ್ಮಲ್, ಹೊಸಬೆಳಕು ಸಂಜೀವಿನಿ ಒಕ್ಕೂಟದ ಮುಖ್ಯ ಪುಸ್ತಕ ಬರಹಗಾರರಾದ ಗಾಯತ್ರಿ, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಾದ ಮಲ್ಲಿಕಾರ್ಜುನ, ಸಿರವಾರ ಪಟ್ಟಣ ಪಂಚಾಯಿತಿ ನಗರ ಪುನರ್ವಸತಿ ಕಾರ್ಯಕರ್ತರು ಸೇರಿದಂತೆ ಅನೇಕ ವಿಕಲಚೇತನ ಬಂಧುಗಳು ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಶೋಭೆ ತಂದರು

# ರಾಷ್ಟ್ರೀಯ ಮತದಾರ ದಿನಾಚರಣೆ
# ರಾಯಚೂರಲ್ಲಿ ಪ್ರಬಂಧ ಸ್ಪರ್ಧೆ ನಡೆಸಿ ವಿದ್ಯಾರ್ಥಿಗಳಿಗೆ ಜಾಗೃತಿ

ಧೈರ್ಯದ ದಾರಿ

**ರಾಯಚೂರು,ಡಿ.26:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಮತದಾರ ದಿನಾಚರಣೆಯ ಪ್ರಯುಕ್ತ ಜಿಲ್ಲಾಮಟ್ಟದ ಪ್ರಬಂಧ ಸ್ಪರ್ಧೆಯು ಇತ್ತೀಚೆಗೆ ನಗರದ ಜಲ ನಿರ್ಮಲ ಸಭಾಂಗಣದಲ್ಲಿ ನಡೆಯಿತು. ಶಾಲಾ ಮಟ್ಟದಲ್ಲಿ ಹಾಗೂ ತಾಲೂಕು ಮಟ್ಟದಲ್ಲಿ ಈ ಹಿಂದೆ ನಡೆದ ಪ್ರಬಂಧ ಸ್ಪರ್ಧೆಯಲ್ಲಿ ಭಾಗಿಯಾದ ಪ್ರಬಂಧ ವಿಜೇತರು ಜಿಲ್ಲಾಮಟ್ಟದ ಸ್ಪರ್ಧೆಗಾಗಿ ಜಲನಿರ್ಮಲ ಸಭಾಂಗಣದಲ್ಲಿ ಸೇರಿದ್ದರು.

ಪ್ರಜಾಪ್ರಭುತ್ವದಲಿ ಮತದಾನ ಮತ್ತು ಚುನಾವಣೆ ವಿಷಯಗಳ ಬಗ್ಗೆ ವಿದ್ಯಾರ್ಥಿಗಳಿಗೆ ಪ್ರಬಂಧದ ವಿಷಯ ನೀಡಲಾಯಿತು.

ಪ್ರೌಢಶಾಲೆ ವಿಭಾಗ, ಪದವಿ ಪೂರ್ವ ಕಾಲೇಜು ವಿಭಾಗ ಮತ್ತು ಪದವಿ ಮತ್ತು ವಿಶ್ವವಿದ್ಯಾಲಯಗಳ ವಿಭಾಗವಾರು ಪ್ರತ್ಯೇಕ ವಿಷಯಗಳ ಮೇಲೆ ವಿದ್ಯಾರ್ಥಿಗಳು ಪ್ರಬಂಧ ಬರೆದರು.

ಸಸಿಗೆ ನೀರು ಹಾಕಿ ಸ್ಪರ್ದೆ ಉದ್ಘಾಟಿಸಿದ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ ಮಾತನಾಡಿ, ನಮ್ಮದು ಪ್ರಜಾಪ್ರಭುತ್ವ ರಾಷ್ಟವಾಗಿದೆ. ವಿಶ್ವದಲ್ಲಿಯೇ ಭಾರತದ ಸಂವಿಧಾನವು ಲಿಖಿತ ಸಂವಿಧಾನವಾಗಿದೆ. ಬೇರೆ ದೇಶಗಳಿಗೆ ಹೋಲಿಸಿದರೆ, ನಮಗೆ ಬೇಕಾಗಿರುವಂತ ಜನನಾಯಕನನ್ನು



ಆಯ್ಕೆ ಮಾಡುವಂತಹ ಅಧಿಕಾರವು ಮತದಾರರಿಗೆ ಸಂವಿಧಾನಬದ್ಧವಾಗಿ ಬಂದಿದೆ.

ಮಹತ್ವದ ಮತದಾನದ ಅವಕಾಶವು 18 ವರ್ಷ ಮೇಲ್ಪಟ್ಟ ಎಲ್ಲರಿಗೂ ಸಮಾನವಾಗಿ ಸಿಕ್ಕಿರುವುದು ಒಂದು ಸುವರ್ಣ ಅವಕಾಶ. ರಾಷ್ಟ ಮತ್ತು ರಾಜ್ಯ ಚುನಾವಣಾ ಆಯೋಗವು ಇಂತಹ ಪ್ರಬಂಧ ಸ್ಪರ್ಧೆಯನ್ನು ಆಯೋಜನೆ ಮಾಡುವುದರ ಮೂಲಕ ವಿದ್ಯಾರ್ಥಿಗಳಿಗೆ ಚುನಾವಣೆ ಮತ್ತು ಮತದಾನದ ಅರಿವು ಮೂಡಿಸುವಂತಹ ಕೆಲಸವನ್ನು ಮಾಡುತ್ತಿದೆ.

ಚುನಾವಣೆ ಮತ್ತು ಮತದಾನ ಸಂದರ್ಭದಲ್ಲಿ ಹಲವಾರು ರೀತಿಯ ಕಾರ್ಯ ಚಟುವಟಿಕೆಗಳು ನಡೆಯುತ್ತಿದ್ದು ಅವುಗಳ ಕುರಿತು ಅರಿವನ್ನು ಮೂಡಿಸುವಂತಹ ಹಿನ್ನೆಲೆಯಲ್ಲಿ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಆಯೋಜನೆ ಮಾಡಲಾಗಿದೆ. ಇಂಥ ಸ್ಪರ್ಧೆಗಳು ವಿದ್ಯಾರ್ಥಿಗಳ ಚುನಾವಣೆ ಮತ್ತು ಮತದಾನದ ಬಗ್ಗೆ ತಿಳಿದುಕೊಳ್ಳಲು ಅವಶ್ಯಕವಾಗಿವೆ ಎಂದು ತಿಳಿಸಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಕೆ.ಡಿ. ಬಡಿಗೇರ ಅವರು ಮಾತನಾಡಿ, ನಮ್ಮ ಮತದಾನ ವ್ಯವಸ್ಥೆಯು ಪ್ರಜಾಪ್ರಭುತ್ವದ ತಳಹದಿಯಾಗಿದೆ ಎಂದರು.

ಈ ಪ್ರಬಂಧ ಸ್ಪರ್ಧೆಯನ್ನು ರಾಯಚೂರ ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ನಡೆಸಿ ರಾಷ್ಟ್ರೀಯ ಮತದಾರ ದಿನಾಚರಣೆಯನ್ನು ಯಶಗೊಳಿಸಲು ಶ್ರಮಿಸಿರುವುದು ಅಭಿನಂದನಾರ್ಹ ಸಂಗತಿ ಎಂದರು.

ರಾಷ್ಟ್ರೀಯ ಮತದಾರ ದಿನಾಚರಣೆ ಕಾರ್ಯಕ್ರಮದ ಶಾಲಾ ಶಿಕ್ಷಣ ವಿಭಾಗದ ನೋಡಲ್ ಅಧಿಕಾರಿ ಡಾ. ದಂಡಪ್ಪ ಬಿರಾದಾರ ಮಾತನಾಡಿ, ನಮ್ಮ ದೇಶದಲ್ಲಿ ಚುನಾವಣೆಗಳು ಮತ್ತು ಮತದಾನ ಪ್ರಕ್ರಿಯೆಗಳು ನಿರಂತರವಾಗಿ ನಡೆಯುತ್ತವೆ. ಒಂದು ಮತ ದೇಶಕೆ ಹಿತ. ನನ್ನ ಮತ ನನ್ನ ಧ್ವನಿ. ಮತದಾನಕ್ಕೆ ಮಹತ್ವ ಶಕ್ತಿ ಇದೆ ಎಂಬುದನ್ನು ಎಲ್ಲರೂ ಅರಿಯಬೇಕು ಎಂದು ತಿಳಿಸಿದರು.

ಸಮಾರಂಭದಲ್ಲಿ ಪದವಿ ಪೂರ್ವ ಶಿಕ್ಷಣ ವಿಭಾಗದ ಮಂಜುನಾಥ್, ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಡಾ. ಚನ್ನಬಸವ, ಡಾ.ಶಂಕರನಂದಾ ಜಿ. ಉಪಸಿತರಿದ್ದರು.

ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಶಿಕ್ಷಣ ಸಂಯೋಜಕರಾದ ಸಿ ಪಿ ಓದಿಸೊವಮಠ ಸ್ವಾಗತಿಸಿದರು. ವಂದಿಸಿದರು.

# ರಾಜ್ಯಮಟ್ಟದ ಸ್ಕೌಟ್ ಗೈಡ್ ಜಂಬೋರೆಟ್ ಗೆ ಮಾನ್ವಿ ವಿದ್ಯಾರ್ಥಿಗಳು ಪ್ರಯಾಣ




ಧೈರ್ಯದ ದಾರಿ

**ಮಾನ್ವಿ,ಡಿ.26:** ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಸಂಸ್ಥೆ ಬೆಳಗಾವಿಯಲ್ಲಿ ಆಯೋಜಿಸಿರುವ ಸ್ಕೌಟ್ ಗೈಡ್ ರಾಜ್ಯ ಜಾಂಬೊರೇಟ್ ನಲ್ಲಿ ಭಾಗವಹಿಸಲು, ನಮ್ಮ ವಿವಿಧ ಕೌಶಲಗಳನ್ನು ಪ್ರದರ್ಶಿಸಲು ಮಾನ್ವಿ ಸ್ಥಳೀಯ ಸಂಸ್ಥೆಯ ನೇತಾಜಿ ಶಾಲೆ, ಕಾಕಟಿಯ ಶಾಲೆ, ಗುರುಕುಲ ಶಾಲೆಯ ಸುಮಾರು 50 ವಿದ್ಯಾರ್ಥಿಗಳು ಭಾಗವಹಿಸಲು ಪ್ರಯಾಣ ಬೆಳೆಸಿದರು. ಸ್ಥಳೀಯ ಸಂಸ್ಥೆಯ ಅಧ್ಯಕ್ಷರಾದ ಬಿ ಬಲರಾಮಕೃಷ್ಣ ಹಸಿರು ಧ್ವಜ ಚಾಲನೆ ನೀಡುವ ಮೂಲಕ ಮಕ್ಕಳಿಗೆ ಬಿಳ್ಕೊಟ್ಟರು. ಈ ಸಂದರ್ಭದಲ್ಲಿ ಕಾರ್ಯದರ್ಶಿ ಎಮ್ ರಾಮಲಿಂಗಪ್ಪ, ಜಂಟಿ ಕಾರ್ಯದರ್ಶಿ ನರಸಿಂಹಮೂರ್ತಿ ದೇಸಾಯಿ, ನೇತಾಜಿ ಶಾಲೆಯ ಕಾರ್ಯದರ್ಶಿ, ವಿಜಯಲಕ್ಷ್ಮ ಕಾಕತೀಯ ಶಾಲೆಯ ಮುಖ್ಯ ಗುರು ವೀರಭದ್ರಗೌಡ, ಗುರುಕುಲ ಶಾಲೆಯ ಕಾರ್ಯದರ್ಶಿ ಜಿತೇಂದ್ರ ಸ್ವಾಮಿ, ಮುಖ್ಯ ಗುರು ಅನುರಾಧ, ತರಬೇತಿ ಸಲಹೆಗಾರ ವಿಶ್ವನಾಥ್ ಗೌಡ ದಳ ನಾಯಕರಾದ ವೆಂಕಟೇಶ್ ಆನಂದ್ ಶಿವರಾಜಪ್ಪ ನಾಯಕೀಯರಾದ ಪರಿಮಳ, ಬಸ್ಸಮ್ಮ, ಸುಪ್ರಿಯಾ, ಇತರೆ ಶಿಕ್ಷಕರು, ಪಾಲಕರು ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಮಕ್ಕಳಿಗೆ ಸ್ಥಳೀಯ ಸಂಸ್ಥೆಯು ವಿಶೇಷ ಬಸ್ಸಿನ ವ್ಯವಸ್ಥೆಯನ್ನು ಮಾಡಿತ್ತು.

### ಮಾನ್ವಿ ದೈಹಿಕ ಶಿಕ್ಷಕರಿಗೆ ಪ್ರಥಮ ಚಿಕಿತ್ಸೆ ಕುರಿತು ಕಾರ್ಯಾಗಾರ:

# ಒತ್ತಡದ ಜೀವನ ಶೈಲಿಯಲ್ಲಿ ಪ್ರಥಮ ಚಿಕಿತ್ಸೆ ಮಾಹಿತಿ ಅತ್ಯಗತ್ಯ: ಚಂದ್ರಶೇಖರ ದೊಡ್ಡಮನಿ



ಧೈರ್ಯದ ದಾರಿ

**ಮಾನ್ವಿ,ಡಿ.26–** ಒತ್ತಡದ ಜೀವನ ಶೈಲಿಯಿಂದಾಗಿ ಬಹುತೇಕರಲ್ಲಿ ಒಂದಲ್ಲಾ ಒಂದು ರೀತಿಯ ಕಾಯಿಲೆಗಳು ಕಾಣಿಸಿಕೊಳ್ಳುತ್ತಿದ್ದು ಪ್ರಥಮ ಚಿಕಿತ್ಸಾ ವಿಧಾನಗಳನ್ನು ಅನುಸರಿಸುವುದರಿಂದ ಹೆಚ್ಚಿನ ಅಪಾಯಗಳನ್ನು ತಡೆಗಟ್ಟಲು ಸಾಧ್ಯವಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ ಹೇಳಿದರು.

ಪಟ್ಟಣದ ಬ್ರಾಹ್ಮಣವಾಡಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ ಬೆಂಗಳೂರು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ರಾಯಚೂರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಮಾನವಿ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ದೈಹಿಕ ಶಿಕ್ಷಕರಿಗೆ ಪ್ರಥಮ ಚಿಕಿತ್ಸೆ ಕುರಿತು ಒಂದು ದಿನದ ಕಾರ್ಯಾಗಾರವನ್ನು ಸಸಿಗೆ ನೀರು ಎರೆದು ಉದ್ಘಾಟಿಸಿ ಮಾತನಾಡಿದ ಅವರು, ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ವಿಶೇಷವಾಗಿ ಮಾನ್ವಿ ತಾಲೂಕಿಗೆ ಹೆಚ್ಚಿನ ಆದ್ಯತೆಯನ್ನು ನೀಡುವ ಮೂಲಕ ಶಾಲೆಗಳಲ್ಲಿ ಉಪಯುಕ್ತವಾದ ಪ್ರಮುಖ ಮೂರು ಕಾರ್ಯಕ್ರಮಗಳನ್ನು ನೀಡಿದ್ದಾರೆ. ಪ್ರಥಮವಾಗಿ ಶಾಲೆಗಳಲ್ಲಿ ವಿಜ್ಞಾನ ವಸ್ತುಗಳ ಪ್ರದರ್ಶನ ಮತ್ತು ಎಸ್‌ಎಸ್‌ಎಲ್ಸಿ ಫಲಿತಾಂಶ ಸುಧಾರಣೆಗಾಗಿ ವಿಜ್ಞಾನ ವಿಷಯ ಶಿಕ್ಷಕರಿಗೆ ತರಬೇತಿ ಕಾರ್ಯಾಗಾರ ಹಾಗೂ ದೈಹಿಕ ಶಿಕ್ಷಕರಿಗೆ ಪ್ರಥಮ ಚಿಕಿತ್ಸೆ ಕುರಿತು ಕಾರ್ಯಾಗಾರ ದಂತಹ ಮಹತ್ವದ ಕಾರ್ಯಕ್ರಮಗಳನ್ನು ನೀಡುವ ಮೂಲಕ ಸರ್ಕಾರಿ ಶಾಲೆಗಳ ಬಗ್ಗೆ ಹೆಚ್ಚಿನ ಆಸಕ್ತಿಯನ್ನು ತೋರಿಸಿದ್ದಾರೆ ಎಂದು ಶ್ಲಾಘಿಸಿದರು. ಪ್ರಸ್ತುತ ದಿನಗಳಲ್ಲಿ ಪ್ರಥಮ ಚಿಕಿತ್ಸಾ ವಿಧಾನಗಳ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಳ್ಳುವದು ಅಗತ್ಯವಿದೆ.ವಿಶೇಷವಾಗಿ ದೈಹಿಕ ಶಿಕ್ಷಕರಿಗೆ ಇದರ ಮಾಹಿತಿ ತುಂಬಾ ಉಪಯುಕ್ತವಾಗಿದ್ದು, ಕ್ರೀಡೆಗಳ ಸಮಯದಲ್ಲಿ ಶಾಲಾ ಮಕ್ಕಳಲ್ಲಿ ಉಂಟಾಗುವ ಗಾಯಗಳು, ತಲೆ ಸುತ್ತು ವಿವಿಧ ಸಂದರ್ಭದಲ್ಲಿ ಮಕ್ಕಳಿಗೆ ಪ್ರಥಮ ಚಿಕಿತ್ಸೆಗಳ ವಿಧಾನ ಅಗತ್ಯವಾಗಿದೆ. ಇದರ ಜ್ಞಾನ ಮಕ್ಕಳಿಗೂ ಅಗತ್ಯವಿದೆ. ಪ್ರಸ್ತುತ ಒತ್ತಡದ ಜೀವನದಲ್ಲಿ ಕಾಯಿಲೆಗಳು ಸಹಜವಾಗಿದ್ದೂ ಪ್ರಥಮ ಚಿಕಿತ್ಸಾ ವಿಧಾನಗಳನ್ನು ಅನುಸರಿಸುವುದರಿಂದ ಹೆಚ್ಚಿನ ಅಪಾಯಗಳನ್ನು ತಡೆಗಟ್ಟಲು ಸಾಧ್ಯವಿದೆ ಎಂದರು. ನಂತರ ಆರೋಗ್ಯ ಅಧಿಕಾರಿಗಳಾದ ಡಾ.ಶ್ರೀಧರ, ಡಾ.ಅಂಬಿಕಾ ಅವರು ಆಹಾರ ವಿಧಾನಗಳ ಮಹತ್ವ ಮತ್ತು ಅಗತ್ಯತೆ ಹಾಗೂ ಆಕಸ್ಮಿಕವಾಗಿ ಜರುಗುವ ಬೆಂಕಿಯಿಂದ ಸುಟ್ಟಗಾಯ, ತಲೆ ಸುತ್ತು, ಮೂರ್ಛೆ ಹೋಗುವಿಕೆ, ಕ್ರೀಡಾ ಸಮಯದಲ್ಲಿನ ಗಾಯಗಳು ಇತ್ಯಾದಿಗಳಿಗೆ ಅನುಸರಿಸಬೇಕಾದ ಪ್ರಥಮ ಚಿಕಿತ್ಸಾ ವಿಧಾನಗಳು ಬಗ್ಗೆ ಕಾರ್ಯಾಗಾರದಲ್ಲಿ ಸವಿವರವಾಗಿ ತಿಳಿಸಿಕೊಡಲಾಯಿತು.ನಂತರ ಕಾರ್ಯಾಗಾರದಲ್ಲಿ ವೈದ್ಯ ಅಧಿಕಾರಿಗಳ ಡಾ.ಅಂಬಿಕಾ ಹಾಗೂ ಆರ್ಬಿಎಸ್ಕೆ ವೈದ್ಯ ಅಧಿಕಾರಿ ಡಾ.ಶ್ರೀಧರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ತಾಲೂಕ ದೈಹಿಕ ಶಿಕ್ಷಕ ಸಂಘದ ಅಧ್ಯಕ್ಷರಾದ ದೈ.ಶಿಕ್ಷಕರಾದ ಮಾರುತಿ, ನೂಡಲ್ ಅಧಿಕಾರಿ ಸಿದ್ಧಲಿಂಗೇಶ್ವರ, ಸಂಪನ್ಮೂಲ ವ್ಯಕ್ತಿಗಳಾದ ಶ್ರೀಕಾಂತ್ ಬಾಗೇವಾಡಿ, ಮೌನೇಶ ಸೇರಿದಂತೆ ವಿವಿಧ ಶಾಲೆಗಳ ಶಿಕ್ಷಕರು, ದೈಹಿಕ ಶಿಕ್ಷಕರು ಭಾಗವಹಿಸಿದ್ದರು.

# ಭಾರತೀಯ ಜನತಾ ಪಾರ್ಟಿ ಮಾನ್ವಿ ಮಂಡಲ ವತಿಯಿಂದ ಅಟಲ್ ಸ್ಮೃತಿ ವರ್ಷ ಆಚರಣೆ



ಧೈರ್ಯದ ದಾರಿ

**ಮಾನ್ವಿ,ಡಿ.26–** ಪಟ್ಟಣದ ಭಾರತೀಯ ಜನತಾ ಪಾರ್ಟಿ ಮಾನ್ವಿ ಮಂಡಲ ಕಾರ್ಯಾಲಯದಲ್ಲಿ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಯವರ ಜನ್ಮದಿನ ಅಂಗವಾಗಿ ಅಟಲ್ ಸ್ಮೃತಿ ವರ್ಷ ಆಚರಿಸಲಾಯಿತು. ಬಿಜೆಪಿ. ಮಾನ್ವಿ ಮಂಡಲ ಅಧ್ಯಕ್ಷರಾದ ವೀರಭದ್ರಗೌಡ ಭೋಗವಾತಿ ಮಾತನಾಡಿ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಯವರು ಭಾರತ ದೇಶ ಕಂಡ ಒಬ್ಬ ಶ್ರೇಷ್ಠ ಪ್ರಧಾನಿ ಹಾಗೂ ಕವಿ,ವಾಗ್ಮಿ, ರಾಜಕಾರ 'ಣಿಯಾಗಿದ್ದರು ದೇಶದ ಅಭಿವಿದ್ಧಿಗೆ ಅತ್ಯಂತ ದೊಡ್ಡ ಕೋಡುಗ 'ಯನ್ನು ನೀಡಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಮುಖಂಡರಾದ ಜೆ.ಸುಧಾಕರ್, ಗುರುಸಿದ್ದಪ್ಪ ಕಣ್ಣೂರು,ಶರಣೆಗೌಡ ನಕ್ಕುಂದಿ,ಜಗದೀಶ ಓತ್ತೂರು, ಗೋಪಾಲ ಇಭ್ರಾಮಪುರ್, ಹನಮೇಶ ನಾಯಕ ಜಿನೂರ್, ಕುಮಾರ ಮೇದಾ,ಸುರೇಶ ನಕ್ಕುಂದಿ, ಸೇರಿದಂತೆ ಇನ್ನಿತರರು ಇದ್ದರು

# ಕ್ರಿಸ್‌ಮಸ್ ಹಬ್ಬದ ಆಚರಣೆ: ಸೇಂಟ್ ಮೇರಿಸ್ ಚರ್ಚ್‌ನಲ್ಲಿ ಸೌಹಾರ್ದತಾ ಸಂದೇಶ

ಧೈರ್ಯದ ದಾರಿ




**ಮಾನ್ವಿ,ಡಿ.26–** ನಗರದ ಕೋನಾಪುರ ಪೇಟೆಯ ಸೇಂಟ್ ಮೇರಿಸ್ ಚರ್ಚ್‌ನಲ್ಲಿ ಕ್ರಿಸ್‌ಮಸ್ ಹಬ್ಬದ ಅಂಗವಾಗಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಅವರು ಭಾಗವಹಿಸಿ ಕ್ರೈಸ್ತ ಸಮುದಾಯಕ್ಕೆ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕ್ರಿಸ್‌ಮಸ್ ಹಬ್ಬವು ಶಾಂತಿ, ಪ್ರೀತಿ ಹಾಗೂ ಮಾನವೀಯ ಮೌಲ್ಯಗಳನ್ನು ಸಾರುವ ಮಹತ್ವದ ಹಬ್ಬವಾಗಿದ್ದು, ಎಲ್ಲ ಧರ್ಮಗಳ ನಡುವೆ ಸೌಹಾರ್ದತೆ ಮತ್ತು ಸಹಬಾಳ್ವೆಯನ್ನು ಬಲಪಡಿಸುವುದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಚರ್ಚ್‌ನ ಫಾದರ್ ಸುರೇಶ್ ವಿನ್ಸೆಂಟ್ ಹಾಗೂ ಫಾದರ್ ವಸಂತ್ ಅವರು ಹಬ್ಬದ ಸಂದೇಶ ನೀಡಿದರು. ಸಮಾಜದಲ್ಲಿ ಶಾಂತಿ, ಸಹನೆ ಮತ್ತು ಪರಸ್ಪರ ಗೌರವವನ್ನು ಬೆಳೆಸುವಲ್ಲಿ ಕ್ರಿಸ್‌ಮಸ್ ಹಬ್ಬದ ಸಂದೇಶ ಮಹತ್ವದ್ದಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ತಾಲೂಕು ಅಧ್ಯಕ್ಷರಾದ ಈರಣ್ಣ ಮರ್ಲಟ್ಟಿ, ಹಿರಿಯ ಪುರಸಭೆ ಸದಸ್ಯರಾದ ರಾಜಾ ಮಹೇಂದ್ರ ನಾಯಕ ದೊರೆ, ತಾಲೂಕು ರೈತ ಘಟಕದ ಅಧ್ಯಕ್ಷರಾದ ಶರಣಪ್ಪ ಗೌಡ ಮದ್ಲಾಪುರ, ಪುರಸಭೆ ಸದಸ್ಯರಾದ ಬಾಷಾ ಸಾಬ್, ಶರಣಪ್ಪ ಮೇಧಾ, ತಾಲೂಕು ಮಹಾ ಪ್ರಧಾನ ಕಾರ್ಯದರ್ಶಿ ಪಿ. ರವಿಕುಮಾರ ವಕೀಲರು, ನಗರ ಘಟಕದ ಅಧ್ಯಕ್ಷರಾದ ಹೆಚ್. ಮೌನೇಶ್ ಗೌಡ, ಖಲೀಲ್ ಖುರೇಷಿ, ಮೌಲಾ ಸಾಬ್ ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ಅಬಕಾರಿ ಇಲಾಖೆ: ಜನವರಿ 5ರಂದು ತರಬೇತಿ ಕಾರ್ಯಾಗಾರ

ಧೈರ್ಯದ ದಾರಿ

**ರಾಯಚೂರು,ಡಿ.26:** ಇಲ್ಲಿನ ಅಬಕಾರಿ ಇಲಾಖೆಯಲ್ಲಿ ಇದೇ ಪ್ರಥಮವಾಗಿ ಇ-ಹರಾಜು ಮೂಲಕ ಸನ್ನದುಗಳ ವಿಲೇವಾರಿಗೆ ಕ್ರಮ ಕೈಗೊಂಡಿದ್ದು, ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ಸಾರ್ವಜನರಿಗೆ ನಗರದ ಕೃಷಿ ವಿಶ್ವವಿದ್ಯಾಲಯದ ಸಭಾಂಗಣ-2ರಲ್ಲಿ 2026ರ ಜನವರಿ 5ರ ಬೆಳಿಗ್ಗೆ 11ಗಂಟೆಗೆ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅಬಕಾರಿ ಇಲಾಖೆಯ ಉಪ ಆಯುಕ್ತರಾದ ಮಹೇಂದ್ರ ಕುಮಾರ್ ಅವರು ತಿಳಿಸಿದ್ದಾರೆ.

ರಾಯಚೂರು ಜಿಲ್ಲೆಗೆ ಹಂಚಿಕೆಯಾಗಿರುವ ಒಟ್ಟು 09 ಸನ್ನದುಗಳ ಇ-ಹರಾಜು ನಡೆಯಲಿದೆ. ಅಬಕಾರಿ ಆಯುಕ್ತರು ಹೊರಡಿಸಿರುವ ತರಬೇತಿ ವೇಳಾಪಟ್ಟಿಯನ್ನು ಅಬಕಾರಿ ಇಲಾಖೆಯ ವೆಬ್‌ಸೈಟ್: https:// stateexcise. karnataka.gov.in ಮತ್ತು ಎಮ್‌ಎಸ್‌ಟಿಸಿ ಲಿಮಿಟೆಡ್ ಸಂಸ್ಥೆಯವೆಬ್‌ಸೈಟ್;https:// www.mstce commerce.com ನಲ್ಲಿ ಲಭ್ಯವಿರುತ್ತದೆ.ಹೆಚ್ಚಿನ ಮಾಹಿತಿಗಾಗಿ ರಾಯಚೂರು ವಿಭಾಗದ ಉಪ ಅಧೀಕ್ಷಕರಾದ ಮೋನಪ್ಪ ಮೊಬೈಲ್ ಸಂಖ್ಯೆ: 9606604154, ರಾಯಚೂರು ವಲಯ ಅಬಕಾರಿ ನಿರೀಕ್ಷಕರಾದ ಸತ್ಯನಾರಾಯಣ ಮೊಬೈಲ್ ಸಂಖ್ಯೆ: 9008036727, ಮಾನವಿ ವಲಯ ಅಬಕಾರಿ ನಿರೀಕ್ಷಕರಾದ ಯಮನೂರ್ ಸಾಬ್ ಮೊಬೈಲ್ ಸಂಖ್ಯೆ: 9481857923, ಸಿಂಧನೂರು ವಲಯ ಅಬಕಾರಿ ನಿರೀಕ್ಷಕರಾದ ಗಂಗಾಧರ್ ಬಡಿಗೇರ್ ಮೊಬೈಲ್ ಸಂಖ್ಯೆ: 9110452279, ಲಿಂಗಸುಗೂರು ವಲಯ ಅಬಕಾರಿ ನಿರೀಕ್ಷಕರಾದ ಲಕ್ಷ್ಮಿದೇವಿ ಮೊಬೈಲ್ ಸಂಖ್ಯೆ: 8317359297ಗೆ ಸಂಪರ್ಕ ಮಾಡಬ ಹುದಾಗಿದೆ ಎಂದು ಅಬಕಾರಿ ಇಲಾಖೆಯ ಉಪ ಆಯುಕ್ತರಾದ ಮಹೇಂದ್ರ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.**
**Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE**